# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ

EDITOR: MAHESHWARI BHIMASHI BHARAMANNAVARA

BELAGAVI VARTE

KANNADA DAILY MORNING BELAGAVI

G-mail: belagavivarte1@gmail.com

epaper. belagavivarte.com

Regd No : G2/PMG/KA/NK/BM/157/26-28

Volume: 01 Issue : 49 TUESDAY 28-04-2026 PRGI No : KNKAN/26/A0962 Pages:4 Rs.2.00 M: 9742418836


## ಹೊಸ ಕ್ರಾಂತಿಗೆ ಮುನ್ನುಡಿ ಬರೆಯದಿದ್ದರೆ ಅಹಿಂದ ದೂರ; ನಮ್ಮ ಸರ್ಕಾರದಲ್ಲೇ ಕೆಲವರು ಭರವಸೆ ಈಡೇರಿಸಲು ಬಿಟ್ಟಿಲ್ಲ



**ಹುಬ್ಬಳ್ಳಿ:** ಅಹಿಂದ ತಮ್ಮ ಪರವಾಗಿದೆ ಎಂದು ಕೆಲ ರಾಜಕಾರಣಿಗಳು ತಿಳಿದುಕೊಂಡಿದ್ದಾರೆ. ಆದರೆ, ಪರಿಸ್ಥಿತಿ ಅವರು ಅಂದುಕೊಂಡಂತಿಲ್ಲ. ಉಂಟಾಗಿರುವ ಸಮಸ್ಯೆಗೆ ಸೂಕ್ತ ಪರಿಹಾರ ನೀಡಿ ಗಟ್ಟಿಗೊಳಿಸಿ ಹೊಸ ಕ್ರಾಂತಿಗೆ ಮುನ್ನುಡಿ ಬರೆಯಬೇಕು. ಇಲ್ಲದಿದ್ದರೆ ಅಹಿಂದ ನಮ್ಮಿಂದ ದೂರವಾಗುತ್ತದೆ ಎಂದು ಸಚಿವ ಸತೀಶ್ ಜಾರಕಿಹೊಳಿ ಹೇಳಿದರು.

ಭಾನುವಾರ ನಗರದಲ್ಲಿ ಆಯೋಜಿಸಿದ್ದ ರಾಜ್ಯಮಟ್ಟದ ಅಹಿಂದ ಹೋರಾಟ ಸಾಧನೆ, ಸಂಕಲ್ಪ ವಿಚಾರ ಸಂಕಿರಣ ಉದ್ಘಾಟಿಸಿ ಮಾತನಾಡಿ, ಈ ಚಳವಳಿ ನಿರಂತರವಾಗಿ ಕ್ರಿಯಾಶೀಲವಾಗಿರಬೇಕು. 20 ವರ್ಷಗಳ ಹಿಂದೆ ಹುಬ್ಬಳ್ಳಿಯಲ್ಲಿ ನಡೆದ ಸಮಾವೇಶ ರಾಜಕೀಯ ಬದಲಾವಣೆಗೆ ಕಾರಣವಾಯಿತು. ಈ ನೆನಪು ಮುಂದಿಟ್ಟುಕೊಂಡು ಏನೆಲ್ಲ ಬದಲಾವಣೆಯಾಗಿದೆ, ಏನೇನು ಆಗಬೇಕು ಎನ್ನುವುದನ್ನು ಚಿಂತಿಸಬೇಕು ಎಂದರು.

ಅಹಿಂದ ಸಂಘಟನೆಯನ್ನು ರಾಜಕೀಯ ಲಾಭಕ್ಕಾಗಿ ಮಾಡುತ್ತಿಲ್ಲ, ಜನ ಜಾಗೃತಿಗಾಗಿ ಮಾಡಲಾಗುತ್ತಿದೆ. ಅಹಿಂದ ವರ್ಗವು ಸರಕಾರ ಮತ್ತು ಜನರ ಮಧ್ಯೆ ಸೇತುವೆಯಾಗಿ ಕಾರ್ಯ ನಿರ್ವಹಿಸಬೇಕಿದೆ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಹೇಳಿದ್ದಾರೆ.

ಭವಿಷ್ಯದ ದಿನಮಾನಗಳಲ್ಲಿ ಏನೇನು ಆಗಬೇಕು ಎನ್ನುವುದನ್ನು ಚಿಂತಿಸಬೇಕು. ಇದು ನಾನು ಮುಖ್ಯಮಂತ್ರಿಯಾಗಬೇಕು, ಅಧಿಕಾರಿಯಾಗಬೇಕು ಎನ್ನುವ ರಾಜಕೀಯ ಕಾರ್ಯಾಗಾರವಲ್ಲ. ನಮ್ಮ ನ್ಯೂನತೆ, ತಪ್ಪುಗಳನ್ನು ಸರಿಪಡಿಸಿಕೊಂಡು ಹೋಗುವುದಕ್ಕಾಗಿ ಎಲ್ಲರ ಸಲಹೆ ಸೂಚನೆಗಾಗಿ ಈ ಕಾರ್ಯಾಗಾರ ನಡೆಸಲಾಗುತ್ತಿದೆ ಎಂದು ಸ್ಪಷ್ಟಪಡಿಸಿದರು.

ರಾಜ್ಯದಲ್ಲಿ ಕಾಂಗ್ರೆಸ್ ಸರಕಾರ ಇದ್ದರೂ ಅಹಿಂದ ವರ್ಗಕ್ಕೆ ಏನೂ ಮಾಡಿಲ್ಲ ಎನ್ನುವ ಟೀಕೆಗಳು ಕೇಳಿ ಬರುತ್ತಿವೆ. ಇಂತಹ ಪ್ರಶ್ನೆಗಳಿಗೆ ಉತ್ತರಿಸಲು ನಾವು ಸನ್ನದ್ಧರಾಗಬೇಕಿದೆ. ನಮ್ಮ ಸರ್ಕಾರದಲ್ಲೇ ಕೆಲವರು ಭರವಸೆ ಈಡೇರಿಸಲು ಬಿಟ್ಟಿಲ್ಲ. ಈ ಅವಧಿಯಲ್ಲಿ ಸಾಕಷ್ಟು ಕಲಿತಿದ್ದೇವೆ.

ಹೋರಾಟದ ಸ್ವರೂಪ ಬದಲಿಸಿಕೊಳ್ಳಬೇಕಿದೆ. ರಾಜಕೀಯ, ಸಾಮಾಜಿಕ ನ್ಯಾಯದ ಬಗ್ಗೆ ತಿಳಿದುಕೊಳ್ಳಬೇಕು. ಸಾಕಷ್ಟು ಸಭೆ, ಸಮಾವೇಶ ನಡೆಸಿದರೂ ಬದಲಾವಣೆ ಸಾಧ್ಯವಾಗಿಲ್ಲ ಎಂದು ಜಾರಕಿಹೊಳಿ ವಿಷಾದ ವ್ಯಕ್ತಪಡಿಸಿದರು.

## ಎಚ್‌ಡಿಕೆ ಮಾನವೀಯತೆ ತೋರಲಿ

**ಬೆಂಗಳೂರು:** ಸಚಿವ ಸುಧಾಕರ್ ಆರೋಗ್ಯಕ್ಕೆ ಸಂಬಂಧಿಸಿದಂತೆ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರು ನೀಡಿರುವ ವಿವಾದಾತ್ಮಕ ಹೇಳಿಕೆಗೆ ಗರಂ ಆಗಿ ಪ್ರತಿಕ್ರಿಯಿಸಿರುವ ಗೃಹ ಸಚಿವ ಡಾ.ಜಿ. ಪರಮೇಶ್ವರ್, ಇಂತಹ ವಿಚಾರದಲ್ಲಿ ಮಾನವೀಯತೆ ತೋರಬೇಕು ಎಂದಿದ್ದಾರೆ.



ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು ಸುಧಾಕರ್ ಅವರ ಆರೋಗ್ಯ ವಿಚಾರದಲ್ಲಿ ಮಾಹಿತಿಗಳನ್ನು ಮುಚ್ಚಿ ಹಾಕಲಾಗಿದೆ. ಹೆಬ್ಬೆಟ್ಟು ಹಾಕಿಸಿಕೊಳ್ಳಲು ಈ ರೀತಿ ಮಾಡಲಾಗುತ್ತಿದೆ ಎಂದು ಹೇಳಿರುವುದಕ್ಕೆ ಆಕ್ರೋಶ ಹೊರ ಹಾಕಿದ ಅವರು, ಯಾರು ಹೆಬ್ಬೆಟ್ಟು ಹಾಕಿಸಿಕೊಳ್ಳಲು ಆಗುತ್ತದೆ. ಅವರ ಕುಟುಂಬದವರು ಮಾಡಬೇಕು ಅಷ್ಟೇ ಬೇರೆಯವರು ಯಾರು ಮಾಡುತ್ತಾರೆ ಸರ್ಕಾರ ಅವರಿಂದ ಹೆಬ್ಬೆಟ್ಟು ಒತ್ತಿಸಿಕೊಳ್ಳುತ್ತಾ ಎಂದು ಪ್ರಶ್ನಿಸಿದರು.

ಸಚಿವ ಸುಧಾಕರ್ ಐಸಿಯುನಲ್ಲಿದ್ದಾರೆ. ಮಾನವೀಯತೆಯಿಂದ ಮಾತನಾಡಬೇಕು ಎಂದು ಕುಮಾರಸ್ವಾಮಿ ಅವರಿಗೆ ತಿರುಗೇಟು ನೀಡಿದರು.

ಅಧಿಕಾರ ಹಂಚಿಕೆ ಫೈಟ್ಟಿಂಗ್ ಬೆಳವಣಿಗೆ ಬಗ್ಗೆ ಕೇಳಲಾದ ಪ್ರಶ್ನೆಗೆ, ಮಾಡೋದೆ ರಾಜಕೀಯ ಇದರಲ್ಲಿ ಬೆಳವಣಿಗೆ ಏನು. ರಾಜಕಾರಣ ಅಂತ ಅದಕ್ಕೆ ಎಲ್ಲ ಹೇಳೋದು ಪ್ರತ್ಯೇಕವಾಗಿ ರಾಜಕೀಯ ಅಂತ ಏನಿಲ್ಲ. ನಾನು ಮುಖ್ಯಮಂತ್ರಿಗಳೊಂದಿಗೆ ಮಾತನಾಡಿ, ಅವರೊಂದಿಗೆ ಊಟ ಮಾಡಿ ಬಂದಿದ್ದೇನೆ ಅಷ್ಟೇ ಎಂದರು.

ಮಾತು ಕತೆ ಆಗಿರುವುದೆಲ್ಲಾ ಚಾಲ್ತಿಗೆ ಬರುತ್ತದೆ ಎಂಬ ಉಪಮುಖ್ಯಮಂತ್ರಿಗಳ ಹೇಳಿಕೆಗೆ ನಾನು ವ್ಯಾಖ್ಯಾನ ಮಾಡುವ ಅಗತ್ಯವಿಲ್ಲ ಎಂದರು.

ಮಂಗಳೂರು ಬ್ಲಾಸ್ಟ್ ಪ್ರಕರಣಕ್ಕೆ ಸಂಬಂಧಿಸಿದಂತೆ ನ್ಯಾಯಾಲಯದ ತೀರ್ಪು ಬಂದ ಮೇಲೆ ಕಾನೂನು ಪ್ರಕಾರವಾಗಿ ಏನು ಮಾಡಬೇಕು ಆ ಕ್ರಮವನ್ನು ಕೈಗೊಳುತ್ತೇವೆ ಎಂಗು ಪ್ರಶ್ನೆಯೊಂದಕ್ಕೆ ಉತ್ತರಿಸುತ್ತಾ ಹೇಳಿದರು

## ಶಿಂದಿಕುರಬೇಟ ಮಾಧ್ಯಮಿಕ ಶಾಲೆಯ ವಿದ್ಯಾರ್ಥಿಗಳ ಗುರುವಂದನಾ ಕಾರ್ಯಕ್ರಮ

## ಪಾಲಕರು ಶಿಕ್ಷಣದ ಜೊತೆಗೆ ಸಂಸ್ಕಾರವನ್ನು ನೀಡಿ– ಬೆಳಗಲಿ




**ಬೆಳಗಾವಿ ವಾರ್ತೆ ಗೋಕಾಕ:** ಪಾಲಕರು ಶಿಕ್ಷಣದ ಜೊತೆಗೆ ಸಂಸ್ಕಾರವನ್ನು ಕಲಿಸಬೇಕು ಎಂದು ಶಿಕ್ಷಕ ಮಹಾಂತೇಶ ಬೆಳಗಲಿ ಹೇಳಿದರು. ಅವರು ತಾಲೂಕಿನ ಶಿಂದಿಕು ರಬೇಟ ಗ್ರಾಮದ ಡಾ.ಬಿ.ಆರ್. ಅಂಬೇ ಡ್ಕರ ಸಮತಾ ಶಿಕ್ಷಣ ಸಮಿತಿಯ ಮಾಧ್ಯ ಮಿಕ ಶಾಲೆಯ ಎಸ್ ಎಸ್ ಎಲ್ ಸಿ ಸನ್ 2006/ 2007 ಸಾಲಿನ ವಿದ್ಯಾರ್ಥಿಗಳ ಗುರು ವಂದನಾ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದ ಅವರು ವಿದ್ಯಾರ್ಥಿಗಳ ಪ್ರೀತಿ, ವಿಶ್ವಾಸ ಎಂದೂ ಮರೆಯಲಾಗದು ಎಂದು ಹೇಳಿದರಲ್ಲದೆ ಮಕ್ಕಳ ಉಜ್ವಲ ಭವಿಷ್ಯ ರೂಪಿಸಿಕೊಳ್ಳಲು ಶಿಕ್ಷಣ ಅತೀ ಅವಶ್ಯಕವಾಗಿದೆ ಎಂದು ಹೇಳಿದರು.

ಕಾರ್ಯಕ್ರಮವನ್ನು ಮಾಧ್ಯಮಿಕ ಶಾಲೆಯ ಮುಖ್ಯೋಪಾಧ್ಯಾಯ ಪಿ.ಎಚ್. ಗೋಸಬಾಳ ಅವರು ಉದ್ಘಾಟಿಸಿ ಮಾತನಾಡಿದ ಕಳೆದ ಹಲವಾರು ವರ್ಷಗಳ ಹಿಂದೆ ನಮ್ಮ ಶಾಲೆಯಲ್ಲಿ ಶಿಕ್ಷಣ ಕಲಿತು, ಇಂದು ವಿದ್ಯೆ ಹಾಗೂ ಜ್ಞಾನ ನೀಡಿದ ಗುರುಗಳನ್ನು ಒಂದೇ ವೇದಿಕೆಯಲ್ಲಿ ಅವರನ್ನು ಅಭಿಮಾನ ಹಾಗೂ ಗೌರವದಿಂದ ಸನ್ಮಾನಿಸಿದ ಕ್ಷಣ ನಮ್ಮ ಜೀವನದಲ್ಲಿ ಎಂದೂ ಮರೆಯಲಾಗದ ಸಂಗತಿಯಾಗಿದೆ. ವಿದ್ಯಾರ್ಥಿಗಳಿಗೆ ಸರ್ಕಾರದಿಂದ ಹಲವಾರು ಯೋಜನೆಗಳು ಜಾರಿಗೆ ತಂದಿದ್ದು ಅದನ್ನು ವಿದ್ಯಾರ್ಥಿಗಳು ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು.

ಮುಖ್ಯ ಅತಿಥಿಗಳಾಗಿ ಶಿಕ್ಷಕರಾದ ಕೆ.ವಿ.ಕಡ್ಡಿ, ಎಸ್.ಎನ್.ವಡರಟ್ಟಿ, ಆರ್.ಬಿ.ಕರೆಪ್ಪಗೋಳ, ಹಿರೇಮಠ, ಕೃಷ್ಣ ತಡವಳೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ವಿದ್ಯಾರ್ಥಿನಿಯರು ತಮ್ಮ ಶಾಲೆಯ ದಿನಗಳನ್ನು ಸ್ಮರಿಸಿಕೊಂಡರು. ವಿದ್ಯೆ ಕಲಿಸಿದ ಮಾಧ್ಯಮಿಕ ಶಾಲೆಯ ಶಿಕ್ಷಕರನ್ನು ಸನ್ಮಾನಿಸಿ ಗೌರವಿಸಿದರು.

ಕಾರ್ಯಕ್ರಮವನ್ನು ಮಾಹಂತೇಶ್ವರಿ ಹಿರೇಮಠ ಪ್ರಾರ್ಥಿಸಿದರು. ಜ್ಯೋತಿ ನಿಲಗಾರ ಸ್ವಾಗತಿಸಿದರು.ಪ್ರಿಯಾ ಕಬಾಡಗಿ ಮತ್ತು ಶೋಭಾ ಕೊತ್ತಲ ನಿರೂಪಿಸಿದರು. ಆರತಿ ಹೊಸಪೇಟೆ ವಂದಿಸಿದರು.

## ಹೊನಕುಪ್ಪಿ ಯಲ್ಲಪ್ಪ ಪ.ಬನಾಜಿ ಸರ್ಕಾರಿ ಪ್ರೌಢ ಶಾಲೆಗೆ 100 ರಷ್ಟು ಫಲಿತಾಂಶ



**ಬೆಳಗಾವಿ ವಾರ್ತೆ ಮೂಡಲಗಿ:** ಸಮೀಪದ ಹೊನಕುಪ್ಪಿ ಗ್ರಾಮದ ಯಲ್ಲಪ್ಪ ಪ ಬನಾಜಿ ಸರ್ಕಾರಿ ಪ್ರೌಢ ಶಾಲೆಯ ಈ ವರ್ಷದ ಎಸ್ ಎಸ್ ಎಲ್ ಸಿ ಫಲಿತಾಂಶ ನೂರಕ್ಕೆ ನೂರರಷ್ಟು ಹೊಂದಿದೆ ಎಂದು ಶಾಲೆಯ ಮುಖ್ಯೋಪಾಧ್ಯಾಯ ಶ್ರೀ ಸಿ ಬಿ ಪೂಜೇರಿ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

ಪರೀಕ್ಷೆಗೆ ಕುಳಿತ 81 ವಿದ್ಯಾರ್ಥಿಗಳಲ್ಲಿ ಅತ್ಯುನ್ನತ ಶ್ರೇಣಿಯಲ್ಲಿ 11, ಪ್ರಥಮ ಶ್ರೇಣಿಯಲ್ಲಿ 43, ದ್ವಿತೀಯ ಶ್ರೇಣಿ 15 ಹಾಗೂ ತೃತೀಯ ಶ್ರೇಣಿಯಲ್ಲಿ 12 ಜನ ವಿದ್ಯಾರ್ಥಿಗಳು ಉತ್ತೀರ್ಣರಾಗಿರುತ್ತಾರೆ.

ಶಾಲೆಗೆ ಬಸವರಾಜ ಪರಮಾನಂದ ದೊಡಗೌಡರ 578 ಅಂಕದೊಂದಿಗೆ ಪ್ರಥಮ, ಅರ್ಪಿತಾ ಚಿದಾನಂದ ಸಿದ್ದಾಪುರ 562 ದ್ವಿತೀಯ, ಪೂಜಾ ಲಕ್ಷ್ಮಣ ದಾರೋಜಿ 553 ಅಂಕ ಪಡೆದು ತೃತೀಯ ಸ್ಥಾನ ಪಡೆದಿದ್ದಾರೆ. ಬಸವರಾಜ ಹಣಮಂತ ಹುಲಗನ್ನವರ, ಪೂಜಾ ಲಕ್ಷ್ಮಣ ದಾರೋಜಿ, ಯಲ್ಲಪ್ಪ ಲಕ್ಷ್ಮಣ ಬಿಗೌಡರ, ಸಮಾಜ ವಿಜ್ಞಾನ ವಿಷಯದಲ್ಲಿ 100 ಕ್ಕೆ 100 ಅಂಕ ಪಡೆದಿದ್ದಾರೆ. ವಿದ್ಯಾರ್ಥಿಗಳ ಸಾಧನೆಗೆ ಶಿಕ್ಷಣ ಇಲಾಖಾ ಅಧಿಕಾರಿಗಳು, ಭೂದಾನಿಗಳು, ಜನಪ್ರತಿನಿಧಿಗಳು, ಪಾಲಕರು, ಶಾಲಾ ಸಿಬ್ಬಂದಿ ವರ್ಗದವರು ಹರ್ಷ ವ್ಯಕ್ತಪಡಿಸಿ ಅಭಿನಂದಿಸಿದ್ದಾರೆ

## ಶಿವಶರಣೆ ಅಕ್ಕಮಹಾದೇವಿಯ ಜಯಂತಿ ಹಾಗೂ ಜಗಜ್ಯೋತಿ, ವಿಶ್ವಗುರು, ಕರ್ನಾಟಕದ ಸಾಂಸ್ಕೃತಿಕ ನಾಯಕರಾದ ಗುರು ಬಸವಣ್ಣನವರ 893ನೇ ಜಯಂತೋತ್ಸವ

**ಬೆಳಗಾವಿ ವಾರ್ತೆ ಹುಬ್ಬಳ್ಳಿ:** ಅಕ್ಷಯ ಕಾಲೋನಿಯ ಮಹಾಶರಣೆ ಗಂಗಾಂಬಿಕಾ ಬಳಗದವರು ಶರಣ ಚಳುವಳಿಯ ಪ್ರಮುಖರಾಗಿ, ಸ್ವಾಭಿಮಾನದ ಪ್ರತೀಕವಾಗಿ, ಸ್ತ್ರೀ ಶಕ್ತಿಯ ಪ್ರತಿಪಾದಕಿಯಾಗಿ, ಮಹಾನ್ ಸಾಧಕಿ, ಕನ್ನಡದ ಪ್ರಪ್ರಥಮ ಕವಯಿತ್ರಿ , ವೈರಾಗ್ಯನಿಧಿ, ಶಿವಶರಣೆ ಅಕ್ಕಮಹಾದೇವಿಯ ಜಯಂತಿ ಹಾಗೂ ಜಗಜ್ಯೋತಿ, ವಿಶ್ವಗುರು, ಕರ್ನಾಟಕದ ಸಾಂಸ್ಕೃತಿಕ ನಾಯಕರಾದ ಗುರುಬಸವ ಣ್ಣನವರ 893ನೇ. ಜಯಂತೋತ್ಸವ ಮತ್ತು ವಚನ ಸಂಗೀತ್ ಕಾರ್ಯಕ್ರಮವನ್ನು ಆಯೋಜಿಸಿದ್ದರು. ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ ಕಾರ್ಯದರ್ಶಿ, ಬಸವ ಪರಿಸರ ಸಂರಕ್ಷಣಾ ಸಮಿತಿಯ ಕಾರ್ಯದರ್ಶಿ, ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿಯ ಜಿಲ್ಲಾ ಘಟಕದ ಉಪಾಧ್ಯಕ್ಷ, ಕರ್ನಾಟಕ ವಚನ ಸಾಹಿತ್ಯ ಪರಿಷತ್‌ನ ಜಿಲ್ಲಾ ಘಟಕದ ಕಾರ್ಯಾಧ್ಯಕ್ಷ, ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ ಟ್ರಸ್ಟಿ, ಗ್ರಂಥಪಾಲಕ ಡಾ. ಸುರೇಶ ಡಿ. ಹೊರಕೇರಿ ಅವರು ಜಗಜ್ಯೋತಿ ಬಸವೇಶ್ವರ ಅವರ ಭಾವಚಿತ್ರಕ್ಕೆ ಹಾಗೂ ವೈರಾಗ್ಯನಿಧಿ, ಶಿವಶರಣೆ ಅಕ್ಕಮಹಾದೇವಿಯ ಅವರ ಭಾವಚಿತ್ರಕ್ಕೆ ಪುಷ್ಪಾರ್ಪಣೆ ಮಾಡುವ ಮೂಲಕ ಗೌರವ ಅರ್ಪಣೆ ಮಾಡಿ, ಭಕ್ತಿ ಪೂರ್ವಕ ನಮನಗಳನ್ನು ಸಲ್ಲಿಸಿದರು. ವಚನ ಸಂಗೀತ ಕಾರ್ಯಕ್ರಮ ಪ್ರಸ್ತುತ ಪಡಿಸಿದ ಹಿಂದೂಸ್ತಾನಿ ಸಂಗೀತ್ ಕಲಾವಿದೆ, ಕೆಸಿಡಿ ಯ ವಿದ್ಯಾರ್ಥಿನಿ ಶಿವಾನಿ ಕವತೇಕರ್ ಅವರಿಗೆ ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ, ಬಸವ ಪರಿಸರ ಸಂರಕ್ಷಣಾ ಸಮಿತಿಯ ಪದಾಧಿಕಾರಿಗಳು ಅಭಿಮಾನದಿಂದ ಶಾಲು, ಮಾಲಾರ್ಪಣೆ ಮಾಡಿ ಗೌರವದಿಂದ ಆತ್ಮೀಯವಾಗಿ ಸನ್ಮಾನಿಸಿದರು. ಅಭಿನಂದಿಸಿ, ಮುಂದಿನ ಶೈಕ್ಷಣಿಕ ಜೀವನ ಯಶಸ್ವಿಯಾಗಿ ನೆರವೇರಲಿ, ಸಂಗೀತ ಕ್ಷೇತ್ರದಲ್ಲಿ ಅಪಾರ ಸಾಧನೆ ಮಾಡಲಿ ಎಂದು ಶುಭ ಕೋರಿದರು.



ಪ್ರತಿ ಸೋಮವಾರ ಸಂಜೆ ವಿದ್ಯಾನಗರದ ಅಕ್ಷಯ ಕಾಲನಿ 4ನೇ ಹಂತ ಬನ್ನಿ ಮಂಟಪ ಉದ್ಯಾನವನದಲ್ಲಿ ಶರಣರ ಮಹಾತ್ಮರ ಚಿಂತನೆಗಳನ್ನು ಹಂಚಿಕೊಳ್ಳುವ ಉದ್ಧೇಶದಿಂದ ಕೆಲವು ಹಿರಿಯ ಮಹಿಳೆಯರು ಪ್ರೊ ಸ್ನೇಹಾ ಭೂಸನೂರ ಅವರ ಜೋತೆ ಸೇರಿ ಕಟ್ಟಿಕೊಂಡ ಶರಣೆ ಗಂಗಾಂಬಿಕಾ ಬಳಗದ ವತಿಯಿಂದ ಮಹಾಮನೆ ವಿಶಿಷ್ಟ ಹಾಗೂ ವಿನೂತನ ಕಾರ್ಯಕ್ರಮ ಮಾಡುತ್ತಾ ಬಂದಿದ್ದಾರೆ. ಶರಣೆ ಗಂಗಾಂಬಿಕಾ ಬಳಗದವರು ವೈರಾಗ್ಯನಿಧಿ, ಶಿವಶರಣೆ ಅಕ್ಕಮಹಾ ದೇವಿಯ ಹಾಗೂ ಜಗಜ್ಯೋತಿ ಬಸವೇಶ್ವರ ಅವರ ಜಯಂತೋತ್ಸವ ಕಾರ್ಯಕ್ರಮವನ್ನು ಅತ್ಯಂತ ಶ್ರದ್ಧಾ, ಭಕ್ತಿಯಿಂದ ಆಚರಿಸಿದರು.

ನಿವೃತ್ ಪ್ರಾಧ್ಯಾಪಕರು, ಸಂಯೋಜಕರಾದ ಡಾ. ಸ್ನೇಹಾ ಭೂಸನೂರ, ಸಾಹಿತಿ ಕೆ ಶಾಂತಾ ಬಸವರಾಜ, ಡಾ ಪ್ರಕಾಶ್ ಮುನ್ನೋಳಿ , ಸುಜಯ್ ಸುರೇಶ ಹೊರಕೇರಿ ಸೋಹನ ಸುರೇಶ ಹೊರಕೇರಿ, ಸಹನಾ ಸುರೇಶ ಹೊರಕೇರಿ, ಸುಪ್ರಿಯಾ ಸುರೇಶ ಹೊರಕೇರಿ, ವಿಜಯಲಕ್ಷ್ಮಿ ಗಂಗಲ್, ಶಾಂತಾ ಪಟ್ಟಣಶೆಟ್ಟಿ, ಶಶಿಕಲಾ ಕೊಡೇಕಲ್, ಉಮಾ ಹುಲಿಕಂತಿಮಠ, ಆಶಾ ಕವಳಿ , ರತ್ನಾ ಬಸಾಪುರ , ಮಂಜುಳಾ ಪಾಟೀಲ, ಮಂಜುಳಾ ಹಿರೇಮಠ, ಗೀತಾ ಸಾಲಿಮಠ, ರವೀಂದ್ರ ದಂಪತಿ, ವಿರುಪಾಕ್ಷಪ್ಪ ಭೂಸನೂರ , ಬಿ ಬಿ ಪಟ್ಟಣಶೆಟ್ಟಿ, ರೇಖಾ ನಾರಾ, ಸೀಮಾ ಮದನಭಾವಿ , ಮುಂತಾದವರು ಭಾಗವಹಿಸಿ, ಜಯಂತೋತ್ಸವ ಕಾರ್ಯಕ್ರಮವನ್ನು ಅತ್ಯಂತ ಯಶಸ್ವಿಗೊಳಿಸಿದರು. ಗ್ರಂಥಪಾಲಕ ಡಾ. ಸುರೇಶ ಡಿ. ಹೊರಕೇರಿ ಅವರು ಶರಣೆ ಗಂಗಾಂಬಿಕಾ ಬಳಗದವರು ಮಾಡುತ್ತಿರುವ ಕಾರ್ಯಗಳ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು. ಟಿವಿ ಮೊಬೈಲ್ ಹಾವಳಿಯಲ್ಲಿ ಪ್ರತಿ ಸೋಮವಾರ ಸಂಜೆ ಸೇರಿ ಶರಣರ, ಮಹಾತ್ಮರ ವಿಚಾರ ಚಿಂತನ ಮಂಥನ ಮಾಡುತ್ತಿರುವುದು ಶ್ಲಾಘನೀಯ ಕಾರ್ಯವಾಗಿದೆ ಎಂದು ಹರ್ಷ ವ್ಯಕ್ತಪಡಿಸಿ, ಶುಭ ಕೋರಿದರು.



**ಬೆಳಗಾವಿ ವಾರ್ತೆ ಹುಬ್ಬಳ್ಳಿ:** ಹುಬ್ಬಳ್ಳಿಯಲ್ಲಿ ಹುಟ್ಟಿ ಬೆಳೆದ ಬ್ರಿಟಿಷ್ ಆಳ್ವಿಕೆಯ ಕಾಲದಲ್ಲಿ ಮುಂಬೈ ಪ್ರೆಸಿಡೆನ್ಸಿಯಲ್ಲಿ ಹಲವಾರು ಖಾತೆಗಳಲ್ಲಿ ಸಚಿವರಾಗಿದ್ದ ಅದರಲ್ಲೂ ಶಿಕ್ಷಣ ಖಾತೆ ಸಚಿವರಾಗಿದ್ದಾಗ ಉತ್ತರ ಕರ್ನಾಟಕದಲ್ಲಿ ಶೈಕ್ಷಣಿಕ ಕ್ಷೇತ್ರಕ್ಕೆ ಮರೆಯಲಾಗದ ಕೊಡುಗೆ ನೀಡಿದ ಸರ್ ಸಿದ್ಧಪ್ಪ ಕಂಬಳಿ ಅವರ ಪುಣ್ಯ ಸ್ಮರಣೆ ನಿಮಿತ್ತ ಪಾಲಿಕೆ ಎದುರಿಗೆ ಇರುವ ಸರ್ ಸಿದ್ಧಪ್ಪ ಕಂಬಳಿ ಅವರ ಮೂರ್ತಿಗೆ ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ, ಬಸವ ಪರಿಸರ ಸಂರಕ್ಷಣಾ ಸಮಿತಿಯ ವತಿಯಿಂದ ಮಾಲಾರ್ಪಣೆ ಮಾಡುವ ಮೂಲಕ ಗೌರವ ಅರ್ಪಣೆ ಮಾಡಿ, ನಮನಗಳನ್ನು ಸಲ್ಲಿಸಲಾಯಿತು. ಸರ್ ಸಿದ್ಧಪ್ಪ ಕಂಬಳಿ ಅವರು ಮಾಡಿದ ಸೇವಾ ಕಾರ್ಯಗಳನ್ನು ಸ್ಮರಿಸಲಾಯಿತು. ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ ಕಾರ್ಯದರ್ಶಿ, ಬಸವ ಪರಿಸರ ಸಂರಕ್ಷಣಾ ಸಮಿತಿಯ ಕಾರ್ಯದರ್ಶಿ, ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿಯ ಜಿಲ್ಲಾ ಘಟಕದ ಉಪಾಧ್ಯಕ್ಷ, ಕರ್ನಾಟಕ ವಚನ ಸಾಹಿತ್ಯ ಪರಿಷತ್‌ನ ಜಿಲ್ಲಾ ಘಟಕದ ಕಾರ್ಯಾಧ್ಯಕ್ಷ, ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ ಟ್ರಸ್ಟಿ, ಗ್ರಂಥಪಾಲಕ ಡಾ. ಸುರೇಶ ಡಿ. ಹೊರಕೇರಿ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ ಉಪಾಧ್ಯಕ್ಷ ಚನ್ನಬಸಪ್ಪ ಧಾರವಾಡಶೆಟ್ಟರ, ದಲಿತ ಕಾರ್ಮಿಕರ ಅಸಂಘಟಿತ ಒಕ್ಕೂಟದ ಅಧ್ಯಕ್ಷ ವಿಜಯ್ ಕರ್ರ, ಗೋಪಾಲ, ಗಂಗಾಧರ ಪೆರುರ್ , ಹಿರಿಯ ಕಾರ್ಮಿಕರು , ಮುಂತಾದವರು ಇದ್ದರು.

# ಮಹಾಲಕ್ಷ್ಮೀ ಅರ್ಬನ ಕೋ-ಆಪ ಸೊಸೈಟಿಗೆ 4.30 ಕೋಟಿ ರೂ ಲಾಭ: ಪಾರ್ಶಿ



**ಬೆಳಗಾವಿ ವಾರ್ತೆ ಮೂಡಲಗಿ:** ಪಟ್ಟಣದ ಪ್ರತಿಷ್ಠಿತ ಸಹಕಾರಿ ಸಂಘಗಳಲ್ಲಿ ಒಂದಾದ ಶೀ ಮಹಾಲಕ್ಷ್ಮೀ ಅರ್ಬನ ಕೋ-ಆಪ ಕ್ರೆಡಿಟ್ ಸೊಸಾಯಿಟಿಯು ಆರ್ಥಿಕ ವರ್ಷ 2025-26ರ ಅಂತ್ಯಕ್ಕೆ 4.30 ಕೋಟಿ ರೂ ಲಾಭಗಳಿಸಿದೆ ಎಂದು ಸಂಘದ ಅಧ್ಯಕ್ಷ ಸಂತೋಷ ಪಾರ್ಶಿ ತಿಳಿಸಿದರು.

ಅವರು ಪಟ್ಟಣದ ಶೀ ಮಹಾಲಕ್ಷ್ಮೀ ಅರ್ಬನ ಸೊಸಾಯಿಟಿಯ ಸಭಾ ಭವನ ದಲ್ಲಿ ಜರುಗಿದ ಸಭೆಯಲ್ಲಿ ಸೊಸೈಟಿಯ 2025-26ರ ಆರ್ಥಿಕ ವರ್ಷದ ವಹಿವಾಹಿಟಿನ ಮಾಹಿತಿಯನ್ನು ವಿವರಿಸಿ ಮಾತನಾಡಿ, ಸೊಸೈಟಿಯು ಕಳೆದ ಮಾರ್ಚ ಅಂತ್ಯಕ್ಕೆ 3.15 ಕೋಟಿ ಶೇರು ಬಂಡವಾಳ, 142.85 ಕೋಟಿ ಠೇವುಗಳು, 22.77 ಕೋಟಿ ನಿಧಿಗಳನ್ನು ಹೊಂದಿ ವಿವಿಧ ಬ್ಯಾಂಕುಗಳಲ್ಲಿ ಠೇವಣಿದಾರರ ಭದ್ರತೆಗಾಗಿ 50.14 ಕೋಟಿ ಗುಂತಾವಣಿ ಮಾಡಿ, 117.42. ಕೋಟಿ ರೂ ವಿವಿಧ ತೇರನಾದ ಸಾಲ ವಿತರಿಸಿದ್ದು. ದುಡಿ ಯುವ ಬಂಡವಾಳ 179.47 ಕೋಟಿ ರೂ ಹೊಂದಿದೆ ಎಂದು ಹೇಳಿದರು.

ಸಂಘವು ಪ್ರಧಾನ ಕಛೇರಿ ಹಾಗೂ 10 ಶಾಖೆಗಳನ್ನು ಹೊಂದಿದ್ದು, ಪ್ರಧಾನಕಛೇರಿ, ಖಾನಟ್ಟಿ ಮತ್ತು ಸುಣಧೋಳಿ ಶಾಖೆಗಳು ಸಂಘದ ಸ್ವಂತ ಭವ್ಯವಾದ ಕಟ್ಟಡಗಳನ್ನು ಹೊಂದಿವೆ. ಕಟಕೋಳ ಶಾಖೆಗೆ ನಿವೇಶನ ಖರೀದಿಸಲಾಗಿದೆ. ಎಲ್ಲ ಶಾಖೆಗಳು ಗಣಕೀಕೃತವಾಗಿವೆ. ಪ್ರಾರಂಭದಿಂದಲೂ ಶೇ.15 ರಷ್ಟು ಶೇರು ಲಾಭಾಂಶ ವಿತರಿಸಲಾಗಿದೆ ಎಂದರು.

ಸಂಘವು ಸನ್ 1992 ಪ್ರಾರಂಭವಾಗಿ 34 ನೇ ವರ್ಷಕ್ಕೆ ಪಾದಾರ್ಪಣೆ ಮಾಡಿದೆ. ಕಡಿಮೆ ಬಂಡವಾಳದಲ್ಲಿ ಅತೀ ಹೆಚ್ಚು ಲಾಭ ಗಳಿಸಿದ್ದು, ಹೆಚ್ಚಿನ ಪ್ರಮಾಣದಲ್ಲಿ ಸಾಲ ವಸೂಲಾತಿ ಆಗಿದೆ. ಇದಕ್ಕೆಲ್ಲ ಸಂಘದ ಆಡಳಿತ ಮಂಡಳಿ ಸದಸ್ಯರು, ಸರ್ವ ಸಿಬ್ಬಂದಿ ವರ್ಗ ಹಾಗೂ ಶಾಖೆಗಳ ಸಲಹಾ ಸಮಿತಿ ಸದಸ್ಯರ ನಿಸ್ವಾರ್ಥ ಸೇವೆಯೇ ಪ್ರಮುಖ ಕಾರಣವಾಗಿದೆ. ಸಮಯಕ್ಕೆ ಸರಿಯಾಗಿ ಸಾಲ ಮತ್ತು ಬಡ್ಡಿಯನ್ನು ಮರುಪಾವತಿ ಮಾಡಿರುವದರಿಂದ ಹೆಚ್ಚಿನ ಲಾಭ ಹೊಂದಲು ಸಹಕಾರಿಯಾಗಿದೆ ಎಂದರು.

ಸಭೆಯಲ್ಲಿ ಸೊಸೈಟಿ ಉಪಾಧ್ಯಕ್ಷ ಮಹಾದೇವ ಚ ಗೋಕಾಕ, ನಿರ್ದೇಶಕರಾದ ಮುತ್ತಪ್ಪ ಭೀ ಈರಪ್ಪನವರ, ಶಿವಬಸು ರಾ ಖಾನಟ್ಟಿ, ಮಲ್ಲಪ್ಪ ಗು. ಗಾಣಿಗೇರ, ಡಾ.ಪ್ರಕಾಶ ಶಿವಪ್ಪ ನಿಡಗುಂದಿ, ಸಚೀನ ಪ ಮುನ್ಯಾಳ, ಸಾಂವಕ್ಕ ಮು ಶೆಕ್ಕಿ, ಭಾರತಿ ರ. ಪಾಟೀಲ, ವಿದ್ಯಾಶ್ರೀ ಸು ಮುರಗೋಡ, ಗೌರವ್ವ ಗಿ ಪಾಟೀಲ, ಶೋಭಾ ಮಾ ಕದಂ, ಪ್ರಧಾನ ಕಾರ್ಯದರ್ಶಿ ಚನ್ನಬಸಪ್ಪ ಸಿ ಬಗನಾಳ ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಸಮ ಸಮಾಜದ ಹರಿಕಾರ ಬಸವಣ್ಣ



**ಬೆಳಗಾವಿ ವಾರ್ತೆ ವಿಜಯಪುರ:** ಬಹುದೇವೋಪಾಸನೆಯಿಂದ ಏಕದೇವೋಪಾಸನೆಯೆಡೆಗೆ, ಮಂದಿರದಿಂದ ಅನುಭವ ಮಂಟಪದೆಡೆಗೆ, ಜಾತಿಯಿಂದ ನೀತಿಯೆಡೆಗೆ, ಕರ್ಮ ಸಿದ್ಧಾಂತದಿಂದ ಕಾಯಕ ಸಿದ್ಧಾಂತದೆಡೆಗೆ, ಮೂಢನಂಬಿಕೆಯಿಂದ ವೈಚಾರಿಕತೆಯೆಡೆಗೆ ಹಾಗೂ ಲಿಂಗ ಭೇದವಿಲ್ಲದ ಸಮಸಮಾಜದೆಡೆಗೆ ಕರೆದೊಯ್ದ ಮತ್ತು ಇಂತಹ ಉನ್ನತ ಚಿಂತನೆಗಳನ್ನು ನಾಡಿಗೆ ನೀಡಿದ ಏಕೈಕ ವ್ಯಕ್ತಿತ್ವ ಬಸವಣ್ಣನವರದು ಎಂದು ಕೊಡಗು ವಿಶ್ವವಿದ್ಯಾಲಯದ ಕುಲಪತಿ ಡಾ.ಅಶೋಕ ಆಲೂರ ಹೇಳಿದರು.

ನಗರದಲ್ಲಿ ಶನಿವಾರ ಪುಣೆಯ ಬಸವ ತಿಳುವಳಿಕೆ ಮತ್ತು ಸಂಶೋಧನಾ ಕೇಂದ್ರದ ವಿಜಯಪುರ ಜಿಲ್ಲಾ ಘಟಕ ಆಯೋಜಿಸಿದ ಬಸವ ಜಯಂತಿ ಕಾರ್ಯಕ್ರಮ ಹಾಗೂ ಪ್ರಶಸ್ತಿ ಪ್ರದಾನ ಸಮಾರಂಭದ ಮುಖ್ಯ ಅತಿಥಿಯಾಗಿ ಅವರು ಮಾತನಾಡಿದರು.

ಅಹಿಂಸೆಯ ಪರಾಕಾಷ್ಠೆ ಬೋಧಿಸಿದ ಬಸವ ದರ್ಮ ಇದು ಜಗದ ದರ್ಮ. ಅರಿವು, ಆಚಾರ ಮತ್ತು ಅನುಭಾವ ಇವು ಅದರ ಉತ್ತುಂಗದ ತತ್ವಗಳು. ಅನುಭವ ಮಂಟಪದಲ್ಲಿ ವಿಶ್ವದಲ್ಲೇ ಮೊದಲು ಪ್ರಜಾಪ್ರಭುತ್ವದ ಚಿಂತನೆಗಳು ನೀಡಿದ ಪ್ರಥಮ ಹರಿಕಾರ ಬಸವಣ್ಣನವರು ಎಂದು ಡಾ.ಆಲೂರ ಬಣ್ಣಿಸಿದರು.

ಕಾರ್ಯಕ್ರಮ ಉದ್ಘಾಟಿಸಿದ ವಿಜಯಪುರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ.ಷಗಂಗಾಧರ ಸಂಬಣ್ಣಿ ಮಾತನಾಡಿ, ಲಿಂಗಾಯತರು ಉಪಪಂಗಡಗಳ ಸಂಕುಚಿತ ಭಾವ ತೊರೆದು ಬಸವ ಧರ್ಮ ಪಾಲಿಸಬೇಕು ಎಂದು ಕರೆ ನೀಡಿದರು.

ಪುಣೆಯ ಬಸವ ತಿಳುವಳಿಕೆ ಮತ್ತು ಸಂಶೋಧನಾ ಕೇಂದ್ರದ ಅಧ್ಯಕ್ಷ ಡಾ.ಶಶಿಕಾಂತ ಪಟ್ಟಣ ಮಾತನಾಡಿ, ಜಗತ್ತಿನಲ್ಲಿ ಪಶು-ಪ್ರಾಣಿ-ಪಕ್ಷಿಗಳನ್ನು ಪ್ರೀತಿಸುವ ಹಾಗೂ ವರ್ಗ ಮತ್ತು ವರ್ಣ ಶ್ರೇಷ್ಠತೆಯನ್ನು ತೆಗೆದುಹಾಕಿದ ಏಕೈಕ ಧರ್ಮ ಬಸವ ಧರ್ಮ. ಜಗತ್ತು ಕಂಡ ಬಹು ದೊಡ್ಡ ದಾರ್ಶನಿಕ ಬಸವಣ್ಣ. ಅವರ ಜನ್ಮಭೂಮಿಯಾದ ವಿಜಯಪುಯದಲ್ಲಿ ಸರ್ಕಾರ ವಚನ ವಿಶ್ವವಿದ್ಯಾಲಯ ಸ್ಥಾಪಿಸಬೇಕು. ಅದಕ್ಕಾಗಿ ಇಲ್ಲಿಯ ಜನತೆ ಒಕ್ಕೊರಲಿಂದ ಆಗ್ರಹಿಸಬೇಕು ಎಂದು ಕರೆ ನೀಡಿದರು.

ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಸಂಸ್ಥೆಯ ಅಧ್ಯಕ್ಷ ಸುರೇಶ ದೇಸಾಯಿ, ಬಳ್ಳಾರಿಯ ರಾಷ್ಟ್ರೀಯ ಬಸವ ದಳದ ಅಧ್ಯಕ್ಷೆ ಶಾರದಮ್ಮ ಹಾಗೂ ಧಾರವಾಡದ ಡಾ.ಮೃತ್ಯುಂಜಯ ಶೆಟ್ಟರ ಮಾತನಾಡಿದರು.

ಪುಣೆಯ ಬಸವ ತಿಳುವಳಿಕೆ ಮತ್ತು ಸಂಶೋಧನಾ ಕೇಂದ್ರದ ವಿಶ್ವಸ್ಥರಾದ ಶಾರದಾ ಪಾಟೀಲ (ಮೇಟಿ), ಜಿಲ್ಲಾ ಘಟಕದ ಗೌರವಾಧ್ಯಕ್ಷರಾದ ಡಾ.ಸರಸ್ವತಿ ಪಾಟೀಲ, ಯಾದಗಿರಿ ಜಿಲ್ಲಾ ಅಧ್ಯಕ್ಷೆ ವಿಜಯಲಕ್ಷ್ಮಿ ಹಂಗರಗಿ ವೇದಿಕೆ ಮೇಲಿದ್ದರು.

ಇದೇ ಸಂದರ್ಭದಲ್ಲಿ ನಾಡಿನ 21 ಜನ ಸಾಧಕರಿಗೆ ಕ್ರಾಂತಿ ಗಂಗೋತ್ರಿ ಅಕ್ಕನಾಗಮ್ಮ ಪ್ರಶಸ್ತಿ, ವಚನ ಗಾನಕೋಗಿಲೆ ಪ್ರಶಸ್ತಿ ಹಾಗೂ ಬಸವ ಸೇವಾ ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಲಾಯಿತು.

ಇದೇ ವೇಳೆ ಶರಣ ಸಾಹಿತ್ಯ ಪರಿಷತ್ತಿನ ಹಿರಿಯರಾದ ವ್ಹಿ.ಸಿ.ನಾಗಠಾಣ ಮತ್ತು ಸಿದ್ರಾಮಪ್ಪ ಉಪ್ಪಿನ ಅವರನ್ನು ಸನ್ಮಾನಿಸಲಾಯಿತು.

ಬಸವ ತಿಳುವಳಿಕೆ ಮತ್ತು ಸಂಶೋಧನಾ ಕೇಂದ್ರದ ಜಿಲ್ಲಾ ಘಟಕದ ಅಧ್ಯಕ್ಷ ಪ್ರೊ. ಆರ್.ಎಸ್.ಬಿರಾದಾರ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಪ್ರಧಾನ ಕಾರ್ಯದರ್ಶಿ ಡಾ.ಶಾರದಾಮಣಿ ಹುಣಶ್ಯಾಳ ಸಂದೇಶ ವಾಚಿಸಿದರು. ಸಂಘಟನಾ ಕಾರ್ಯದರ್ಶಿ ಶರಣು ಸಬರದ ಸ್ವಾಗತಿಸಿ, ಪರಿಚಯಿಸಿದರು. ಸವಿತಾ ದೇಶಮುಖ ನಿರೂಪಿಸಿದರು. ಸಿದ್ದಪ್ಪ ಪಡನಾಡ ವಂದಿಸಿದರು.

ಸಂಗೀತ ಕಲಾವಿದರಾದ ಗಾಯಿತ್ರಿ ಬಡಿಗೇರ ಮತ್ತು ಡಾ.ಮೃತ್ಯುಂಜಯ ಶೆಟ್ಟರ ಅವರ ವಚನ ಗಾಯನ ಸಭಿಕರ ಮನಸೂರೆಗೊಂಡಿತು.

ಬಸವ ತಿಳುವಳಿಕೆ ಮತ್ತು ಸಂಶೋಧನಾ ಕೇಂದ್ರದ ಜಿಲ್ಲಾ ಘಟಕದ ಉಪಾಧ್ಯಕ್ಷ, ಉದ್ಯಮಿ ಗಂಗಾಧರ ಬಿ.ಸಾಲಕ್ಕಿ, ಕೋಶಾಧ್ಯಕ್ಷೆ ರತ್ನಾಬಾಯಿ ಬಿರಾದಾರ, ಪುಷ್ಪಾವತಿ ಗೋಟ್ಯಾಳ, ಸಂಘಟನಾ ಕಾರ್ಯದರ್ಶಿಗಳಾದ ರೇಣುಕಾ ಪಾಟೀಲ, ಬಸವರಾಜ ಕೋರಿ, ಬನಶ್ರೀ ಹತ್ತಿ, ಪ್ರೊ. ಬಿ.ಎಂ.ಬಿರಾದಾರ 'ಉದಯರಶ್ಮಿ' ದಿನಪತ್ರಿಕೆ ಪ್ರಕಾಶಕಿ ಶೈಲಾ ಮಣೂರ, ಬೆಳಗಾವಿಯ ಸುಧಾ ಪಾಟೀಲ, ಡಾ.ದಾನಮ್ಮ ಝಳಕಿ, ಗೌರಮ್ಮ ನಾಶಿ ಸೇರಿದಂತೆ ಅನೇಕ ಶರಣ-ಶರಣೆಯರಿದ್ದರು.

# ಉಚಿತ ಶಿಕ್ಷಣಕ್ಕೆ ಯೋಗ ಕ್ಷೇತ್ರದಿಂದ ಆಯ್ಕೆ





**ಬೆಳಗಾವಿ ವಾರ್ತೆ ಗೋಕಾಕ:** ಇಲ್ಲಿನ ಶ್ರೀ ವಿವೇಕಾನಂದ ಯೋಗ ಕೇಂದ್ರದಲ್ಲಿ ಯೋಗ ಗುರು ಆನಂದ ಸೋರಗಾವಿ ಅವರ ಮಾರ್ಗದರ್ಶನದಲ್ಲಿ ಯೋಗ ತರಬೇತಿ ಪಡೆಯುತ್ತಿರುವ ಶ್ರದ್ಧಾ ಕಾಳಪ್ಪ ಕಮ್ಮಾರ ಹಾಗೂ ಸಾನ್ವಿ ಗುರು ಬಬಲಿ ಮೂಡಬಿದರಿಯ ಪ್ರತಿಷ್ಠಿತ ಶಿಕ್ಷಣ ಸಂಸ್ಥೆಯಾದ ಆಳ್ವಾಸ್‌ನಲ್ಲಿ ಉಚಿತ ಶಿಕ್ಷಣಕ್ಕೆ ಯೋಗ ಕ್ಷೇತ್ರದಿಂದ ಆಯ್ಕೆಯಾಗಿದ್ದಾರೆ

ಶ್ರದ್ಧಾ ಕಮ್ಮಾರ 6ನೇ ತರಗತಿ ಆಂಗ್ಲ ಮಾಧ್ಯಮಕ್ಕೆ ಸಾನ್ವಿ ಬಬಲಿ 6ನೇ ತರಗತಿ ಕನ್ನಡ ಮಾಧ್ಯಮಕ್ಕೆ ಆಯ್ಕೆಯಾಗಿದ್ದಾರೆ. ಇನ್ನು ಮುಂದೆ ಈ ಮಕ್ಕಳಿಗೆ ವಿದ್ಯಾಭ್ಯಾಸ ಹಾಗೂ ಯೋಗಭ್ಯಾಸವನ್ನು ಆಳ್ವಾಸ್ ಸಂಸ್ಥೆಯು ಉಚಿತವಾಗಿ ನೀಡಲಿದೆ.

# ಮೇ ತಿಂಗಳಲ್ಲಿ ಪ್ಯಾನ್-ಐಐಟಿ ಬೆಂಗಳೂರು ಸಮಿಟ್ 2026 ಆಯೋಜನೆ

**ಬೆಳಗಾವಿ ವಾರ್ತೆ ಬೆಂಗಳೂರು, :** ಪ್ಯಾನ್ ಐಐಟಿ ಅಲ್ಯೂಮ್ನಿ ಇಂಡಿಯಾ ಅಸೋಸಿಯೇಷನ್ ಮತ್ತು ಕರ್ನಾಟಕ ಸರ್ಕಾರದ ಸಹಯೋಗದಲ್ಲಿ, ಮೇ 16ರಂದು ಬೆಂಗಳೂರಿನಲ್ಲಿ "ಪ್ಯಾನ್-ಐಐಟಿ ಬೆಂಗಳೂರು ಸಮಿಟ್ 2026" ಆಯೋಜಿಸಲಾಗಿದೆ.

"ತಂತ್ರಜ್ಞಾನದಲ್ಲಿನ ಸ್ವಾಯತ್ತತೆ" ಎಂಬ ವಿಷಯದಡಿ ಈ ಸಮಿಟ್ ನಡೆಯಲಿದೆ ಎಂದು ಕರ್ನಾಟಕ ಸರ್ಕಾರದ ಇ-ಆಡಳಿತ ಇಲಾಖೆಯ ಪ್ರಧಾನ ಕಾರ್ಯದರ್ಶಿ ಶ್ರೀ ಪಂಕಜ್ ಕುಮಾರ್ ಪಾಂಡೆ ಅವರು ಇಂದು ನಡೆದ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದ್ದಾರೆ.

ಕರ್ನಾಟಕ, ವಿಶೇಷವಾಗಿ ಬೆಂಗಳೂರು, ಇಂದು ಭಾರತದ ತಂತ್ರಜ್ಞಾನ ಮಹತ್ವಾಕಾಂಕ್ಷೆಯ ಕೇಂದ್ರಬಿಂದುವಾಗಿ ಹೊರಹೊಮ್ಮಿದೆ. ದೇಶದ ಪ್ರಮುಖ ಜಿಡಿಪಿ ಕೊಡುಗೆ ನೀಡುವ ನಗರಗಳಲ್ಲಿ ಬೆಂಗಳೂರು ಒಂದಾಗಿದ್ದು, ವೆಂಚರ್ ಕ್ಯಾಪಿಟಲ್ ಹೂಡಿಕೆಗಳ ಪ್ರಮುಖ ಕೇಂದ್ರವಾಗಿಯೂ ಗುರುತಿಸಿಕೊಂಡಿದೆ. ಸ್ಟಾರ್ಟ್‌ಅಪ್‌ಗಳ ನಿಧಿ ಸಂಗ್ರಹ ಹಾಗೂ ನವೀನ ಚಟುವಟಿಕೆಗಳಲ್ಲಿ ಮಹತ್ತರ ಪಾತ್ರವಹಿಸಿರುವುದು,

ಸಾವಿರಾರು ಇಂಜಿನಿಯರಿಂಗ್ ಕಾಲೇಜುಗಳು ಹಾಗೂ ವಿಶ್ವದ ಅತಿ ದೊಡ್ಡ ಪ್ರತಿಭಾ ಸಂಪನ್ಮೂಲಗಳಲ್ಲಿ ಒಂದನ್ನು ಹೊಂದಿರುವುದು-ಈ ಎಲ್ಲ ಕಾರಣಗಳಿಂದ ಬೆಂಗಳೂರು "ಪೂರ್ವದ ಸಿಲಿಕಾನ್ ವ್ಯಾಲಿ" ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ ಎಂದು ಅವರು ಹೇಳಿದರು.

ಸಾರ್ವಜನಿಕ ವಲಯ ಮತ್ತು ತಾಂತ್ರಿಕ ಕಂಪನಿಗಳ ಮೂಲಕ ಏರೋ ಸ್ಪೇಸ್, ರಕ್ಷಣಾ ಹಾಗೂ ಮೂಲ ಇಂಜಿನಿಯರಿಂಗ್ ಕ್ಷೇತ್ರಗಳಲ್ಲಿ ಕರ್ನಾ ಟಕವು ಬಲವಾದ ನೆಲೆ ನಿರ್ಮಿಸಿತು. ಬಳಿಕ ಇನ್ಫೋಸಿಸ್, ಟಿಸಿಎಸ್, ಎಚ್‌ಸಿ ಎಲ್ ಮತ್ತು ವಿಪ್ರೋ ಮುಂತಾದ ಐಟಿ ದಿಗ್ಗಜಗಳ ಉದಯದೊಂದಿಗೆ ಭಾರತವನ್ನು ಜಾಗತಿಕ ತಂತ್ರಜ್ಞಾನ ನಕ್ಷೆಯಲ್ಲಿ ಸ್ಥಾಪಿಸುವಲ್ಲಿ ಮಹತ್ವದ ಪಾತ್ರವಹಿಸಿದೆ ಎಂದು ಅವರು ವಿವರಿಸಿದರು.



ಪ್ರಸ್ತುತ ದೇಶವು ಡೀಪ್ ಟೆಕ್, ಕೃತಕ ಬುದ್ಧಿಮತ್ತೆ ಮತ್ತು ವೈಜ್ಞಾನಿಕ ನವೀನತೆಯ ಹಂತಕ್ಕೆ ಸಾಗುತ್ತಿದೆ. ಈ ಹಂತದಲ್ಲಿ ಅಕಾಡೆಮಿಯಾ, ಕೈಗಾರಿಕೆ ಮತ್ತು ಸರ್ಕಾರಗಳ ನಡುವಿನ ಗಟ್ಟಿಯಾದ ಸಹಕಾರ ಅತ್ಯವಶ್ಯಕವಾಗಿದೆ. ತಂತ್ರಜ್ಞಾನ ಸ್ವಾಯತ್ತತೆಯನ್ನು ಸಾಧಿಸಲು ಇದು ಪ್ರಮುಖ ಹಂತವಾಗಿದ್ದು, ಈ ಹಿನ್ನೆಲೆಯಲ್ಲಿ ಪ್ಯಾನ್-ಐಐಟಿ ಬೆಂಗಳೂರು ಸಮಿಟ್ 2026 ರೂಪುಗೊಂಡಿದೆ ಎಂದು ತಿಳಿಸಿದರು.

ಪ್ಯಾನ್ ಐಐಟಿ ಅಧ್ಯಕ್ಷರಾದ ಶ್ರೀ ಪ್ರಭಾತ್ ಕುಮಾರ್ (ಐ.ಆರ್.ಎಸ್) ಅವರು ಮಾತನಾಡಿ, ಸಮಿಟ್‌ನಲ್ಲಿ ಉನ್ನತ ಮಟ್ಟದ ಪ್ಲೀನರಿ ಸೆಷನ್‌ಗಳು, ಆಳವಾದ ಪ್ಯಾನೆಲ್ ಚರ್ಚೆಗಳು ಹಾಗೂ ಎಐ, ರಕ್ಷಣಾ, ಸೆಮಿಕಂಡಕ್ಟರ್, ಇಂಧನ, ಮೊಬೈಲಿಟಿ ಮತ್ತು ಆರೋಗ್ಯ ಕ್ಷೇತ್ರಗಳಲ್ಲಿ ಸಮಾಂತರ ಚರ್ಚೆಗಳು ನಡೆಯಲಿವೆ ಎಂದು ಹೇಳಿದರು.

ಆಯ್ದ ಪಿಚ್-ಹ್ಯಾಕಥಾನ್ ಮೂಲಕ ಹೆಚ್ಚಿನ ಸಾಧ್ಯತೆ ಹೊಂದಿರುವ ಸ್ಟಾರ್ಟ್‌ಅಪ್‌ಗಳನ್ನು 200ಕ್ಕೂ ಹೆಚ್ಚು ವೆಂಚರ್ ಕ್ಯಾಪಿಟಲಿಸ್ಟ್‌ಗಳೊಂದಿಗೆ ಸಂಪರ್ಕಿಸಲಾಗುವುದು. ಜೊತೆಗೆ, 10,000 ಮಂದಿ ಭಾಗವಹಿಸುವ ಹ್ಯಾಕಥಾನ್‌ನಲ್ಲಿ ಕರ್ನಾಟಕ ಸರ್ಕಾರ ನೀಡಿದ ನೈಜ ಸಮಸ್ಯೆಗಳಿಗೆ ಪರಿಹಾರಗಳನ್ನು ಕಂಡುಹಿಡಿಯಲಾಗುವುದು ಎಂದರು.

ಭಾರತವು ಜಾಗತಿಕ ತಂತ್ರಜ್ಞಾನ ಸ್ಪರ್ಧೆಯಲ್ಲಿ ಮುನ್ನಡೆಯಲು ಆಳವಾದ ವಿಜ್ಞಾನ ಮತ್ತು ಮೂಲ ತಂತ್ರಜ್ಞಾನ ಕ್ಷೇತ್ರಗಳಲ್ಲಿ ಹೂಡಿಕೆ ಮಾಡುವ ಅಗತ್ಯವಿದೆ. ಪ್ಯಾನ್ ಐಐಟಿ ಸಮುದಾಯವು ಅಪಾರ ಬೌದ್ಧಿಕ ಸಂಪತ್ತು ಮತ್ತು ಜಾಗತಿಕ ಪ್ರಭಾವ ಹೊಂದಿರುವುದರಿಂದ, ಈ ಸಮಿಟ್ ರಾಷ್ಟ್ರೀಯ ಆದ್ಯತೆಗಳನ್ನು ಜಾಗತಿಕ ಆಶಯಗಳೊಂದಿಗೆ ಹೊಂದಿಸಲು ವೇದಿಕೆ 'ಯಾಗಲಿದೆ ಎಂದು ಅವರು ಹೇಳಿದರು.

23 ಐಐಟಿಗಳ 5 ಲಕ್ಷಕ್ಕೂ ಹೆಚ್ಚು ಅಲ್ಯೂಮ್ನಿಗಳ ಸಂಯುಕ್ತ ಚಿಂತನೆಯ ಫಲವಾಗಿರುವ ಈ ಸಮಿಟ್, ಜಾಗತಿಕ ಮಟ್ಟದಲ್ಲಿ ತಂತ್ರಜ್ಞಾನ, ವ್ಯವಹಾರ ಮತ್ತು ನೀತಿ ರೂಪಣೆಯಲ್ಲಿ ಸಕ್ರಿಯ ಸಮುದಾಯವನ್ನು ಒಂದೇ ವೇದಿಕೆಗೆ ತರಲಿದೆ. ನವೀನತೆ, ಉದ್ಯಮಶೀಲತೆ ಮತ್ತು ರಾಷ್ಟ್ರ ನಿರ್ಮಾಣದ ಮುಂದಿನ ಹಂತವನ್ನು ಉತ್ತೇಜಿಸುವ ದಿಕ್ಕಿನಲ್ಲಿ ಇದು ಮಹತ್ವದ ಹೆಜ್ಜೆಯಾಗಿದೆ.

ದಿನಪೂರ್ತಿ ನಡೆಯುವ ಈ ಸಮಿಟ್‌ನಲ್ಲಿ ಮುಖ್ಯ ಭಾಷಣಗಳು, ಪ್ಯಾನೆಲ್ ಚರ್ಚೆಗಳು, ಸಿಎ ರೌಂಡ್‌ಟೇಬಲ್, ಅಗ್ರಗಣ್ಯ ಸ್ಟಾರ್ಟ್‌ಅಪ್‌ಗಳ ಪ್ರದರ್ಶನ, ಹ್ಯಾಕಥಾನ್ ಹಾಗೂ ಇನೋವೇಶನ್ ಪ್ರದರ್ಶನಗಳು ನಡೆಯಲಿವೆ.

ಈ ಸಮಿಟ್‌ನಲ್ಲಿ ಆರ್ಟ್ ಆಫ್ ಲಿವಿಂಗ್ ಸಂಸ್ಥಾಪಕರಾದ ಗುರುದೇವ ಶ್ರೀ ಶ್ರೀ ರವಿ ಶಂಕರ್, ಕರ್ನಾಟಕ ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್, ಭಾರತ ಸರ್ಕಾರದ ಮುಖ್ಯ ಆರ್ಥಿಕ ಸಲಹೆಗಾರ ಡಾ. ವಿ. ಅನಂತ ನಾಗೇಶ್ವರನ್, ಎಎನ್‌ಆರ್‌ಎಫ್ ಸಿಇಒ ಶಿವಕುಮಾರ್ ಕಲ್ಯಾಣರಾಮನ್, ಇಂಡಿಯಾ ಎಐ ಮಿಷನ್‌ನ ಮಾಜಿ ಸಿಇಒ ಅಭಿಷೇಕ್ ಸಿಂಗ್, ತೇಜಸ್ ವಿಮಾನದ ಮುಖ್ಯ ವಿನ್ಯಾಸಕರಾದ ಡಾ. ಕೋಟಾ ಹರಿನಾರಾಯಣ, ಕರ್ನಾಟಕ ಸರ್ಕಾರದ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ (ಇಂಧನ) ಗೌರವ್ ಗುಪ್ತಾ, ಹೆಚ್ಚುವರಿ ಮುಖ್ಯ ಕಾರ್ಯದರ್ಶಿ (ನಗರಾಭಿವೃದ್ಧಿ ಮತ್ತು ಗೃಹ) ತುಷಾರ್ ಗಿರಿ ನಾಥ್, ಇ-ಆಡಳಿತ ಇಲಾಖೆಯ ಪ್ರಧಾನ ಕಾರ್ಯದರ್ಶಿ ಪಂಕಜ್ ಕುಮಾರ್ ಪಾಂಡೆ, ಟ್ಯಾಲಿ ಸೊಲ್ಯೂಶನ್ಸ್ ಸಂಸ್ಥಾಪಕರಾದ ಭಾರತ್ ಗೋಯಂಕಾ, ಮೈಕ್ರೋಸಾಫ್ಟ್ ರಿಸರ್ಚ್ ಇಂಡಿಯಾದ ವ್ಯವಸ್ಥಾಪಕ ನಿರ್ದೇಶಕರಾದ ವೆಂಕಟ್ ಪದ್ಮನಾಭನ್, ಮೀಶೋ ಸಹ ಸಂಸ್ಥಾಪಕ ಹಾಗೂ ಸಿಇಒ ವಿಧಿತ್ ಆತ್ರೇಯ್, ಗ್ರೋವ್ ಸಹ ಸಂಸ್ಥಾಪಕ ಹಾಗೂ ಸಿಒಒ ಹರ್ಷ್ ಜೈನ್, ಅಥರ್ ಎನರ್ಜಿ ಸಹ ಸಂಸ್ಥಾಪಕ ಹಾಗೂ ಸಿಇಒ ತರುಣ್ ಮೆಹ್ತಾ, ಸ್ವಿಗ್ಗಿ ಸಹ ಸಂಸ್ಥಾಪಕ ಫಣಿ ಕಿಶನ್ ಅಡ್ಡೆಪಳ್ಳಿ, ಪಿಡಬ್ಲ್ಯೂಸಿ ಗ್ಲೋಬಲ್ ಕ್ಯಾಪೆಬಿಲಿಟಿ ಸೆಂಟರ್ ಮುಖ್ಯಸ್ಥ ರಾಜೇಶ್ ಓಜಾ ಹಾಗೂ ಎ???ಪಿ ಗ್ಲೋಬಲ್ ಡೆಲಿವರಿ ಮುಖ್ಯಸ್ಥ ರಜನೀಶ್ ಪ್ರಸಾದ್ ಸೇರಿದಂತೆ ಅನೇಕ ಗಣ್ಯರು ಭಾಗವಹಿಸಲಿದ್ದಾರೆ.

# ಯಶಸ್ವಿಯಾದ ಬಣ್ಣದ ಅಂಗಳದಲ್ಲಿ ಚಿಣ್ಣರ ತೇರು ಹಾಗೂ ಮಕ್ಕಳ ಸಂತೆ



**ಬೆಳಗಾವಿ ವಾರ್ತೆ ಧಾರವಾಡ:** ಹರ ಹರ ಮಹಾದೇವ.. ಎಳಿರೋ ಎಳಿರೋ.. ಎಂದು ತೇರನ್ನು ಎಳೆಯುತ್ತಿರುವುದು.. ಇನ್ನೊಂದೆಡೆ ಮಜ್ಜಿಗೆ, ಶೇಂಗಾ ಉಂಡೆಗಳು ಸೇರಿದಂತೆ ಆಹಾರದ ತಿಂಡಿ-ತಿನಿಸುಗಳನ್ನು ಮಾರುತ್ತಿರುವ ಮಕ್ಕಳ ದೃಶ್ಯಗಳು... ಹೌದು ಇಂದಿನ ಆಧುನಿಕತೆಯ ಭರಾಟೆಯಲ್ಲಿ ಮಕ್ಕಳು ಕೇವಲ ಮೊಬೈಲ್‌ಗಳಿಗೆ ಸೀಮಿತವಾಗಿ ಊರು, ಹಳ್ಳಿಗಳಲ್ಲಿ ನಡೆಯುವ ಜಾತ್ರೆಗಳಿಂದ ದೂರ ಉಳಿದಿದ್ದಾರೆ. ಇಂತಹ ಸಂದರ್ಭದಲ್ಲಿ ರಂಗಾಯಣವು ಸೃಷ್ಟಿಸಿದ 'ಚಿಣ್ಣರ ತೇರು ಹಾಗೂ ಮಕ್ಕಳ ಸಂತೆ' ಬಲು ಜೋರಾಗಿಯೇ ನಡೆಯಿತು. ಇಂದು ರಂಗಾಯಣವು 'ಅಭಿನಯ-ಅಭಿವ್ಯಕ್ತಿ" ಧ್ಯೇಯವಾಕ್ಯದಡಿ ಆಯೋಜಿಸಿರುವ ಬೇಸಿಗೆ ಶಿಬಿರದಲ್ಲಿ ಮಕ್ಕಳಿಗಾಗಿ ಸಿದ್ಧಪಡಿಸಿದ್ದ "ರಂಗಾಯಣ ತೇರಿ"ಗೆ ಜನಪದ ಹಾಡುಗಾರರಾದ ಇಮಾಮಸಾಬ್ ವಲ್ಲೆಪ್ಪನವರ ಹಾಗೂ ರಂಗಾಯಣದ ಆಡಳಿತಾಧಿಕಾರಿಗಳಾದ ಶಶಿಕಲಾ ಹುಡೇದ ಅವರು ಪೂಜೆಯನ್ನು ಸಲ್ಲಿಸಿ, ರಂಗಾಯಣದ ಕಲಾವಿದರು, ಸಿಬ್ಬಂದಿಗಳು ಹಾಗೂ ಮಕ್ಕಳು ತೇರನ್ನು ಎಳೆಯುವುದರ ಮೂಲಕ ಚಿಣ್ಣರ ಜಾತ್ರೆಗೆ ಚಾಲನೆಯನ್ನು ನೀಡಿದರು.

ಮಕ್ಕಳಿಗೆ ಗ್ರಾಮೀಣ ಪ್ರದೇಶಗಳ ಸಂಪ್ರದಾಯ ಆಚರಣೆ ಹಾಗೂ ವ್ಯವಹಾರದ ಜ್ಞಾನವನ್ನು ನೀಡುವುದಕ್ಕಾಗಿ ರಂಗಾಯಣದ ಆವರಣದಲ್ಲಿ ಏರ್ಪಡಿಸಲಾಗಿದ್ದ 'ಚಿಣ್ಣರ ತೇರು ಹಾಗೂ ಮಕ್ಕಳ ಸಂತೆಗೆ ಜನಪದ ಹಾಡುಗಾರರಾದ ಇಮಾಮಸಾಬ್ ವಲ್ಲೆಪ್ಪನವರ ಅವರು ಚಾಲನೆ ನೀಡಿ, ಮಾತನಾಡಿ, ಹಳ್ಳಿ ಜನರು ಆಚರಿಸುವ ಸಂಪ್ರದಾಯಗಳ ಮಹತ್ವ ಹಾಗೂ ಸಂತೆಗಳಲ್ಲಿ ಹೇಗೆ ವ್ಯವಹಾರ ಮಾಡಬೇಕು ಎಂಬುದರ ಕುರಿತು ಮಕ್ಕಳಿಗಾಗಿ ರಂಗಾಯಣವು ಆಯೋಜಿಸಿರುವ ಈ ಶಿಬಿರದಲ್ಲಿ ತಿಳಿಸಿಕೊಟ್ಟಿರುವುದು ಸಂತಸದ ಸಂಗತಿಯಾಗಿದೆ. ಹೀಗೆ ರಂಗಾಯಣದ ಕಾರ್ಯಕ್ರಮಗಳು ಯಶಸ್ವಿಯಾಗಲಿ ಎಂದು ಹಾರೈಸಿದರು.

ಮಕ್ಕಳಿಗೆ ಹಳ್ಳಿಗಳಲ್ಲಿ ನಡೆಯುವಂತೆ "ರಂಗಾಯಣದ ತೇರ"ನ್ನು ಆವರಣದಲ್ಲಿ ಸಿದ್ಧಪಡಿಸಿ, ಡೊಳ್ಳುಗಳೊಂದಿಗೆ ಮಕ್ಕಳೇ ಚಿಣ್ಣರ ತೇರಿಗೆ ಜಯವಾಗಲಿ ಎಂದು ಘೋಷವಾಕ್ಯಗಳನ್ನು ಮಕ್ಕಳು ಖುಷಿಯಿಂದ ಕೂಗುತ್ತಾ, ಹಾಡುತ್ತಾ, ಕುಣಿಯುತ್ತ ತೇರನ್ನು ಎಳೆದುಕೊಂಡು ಹೋಗುವ ಮೂಲಕ ಚಿಣ್ಣರ ತೇರಿಗೆ ಮೆರುಗನ್ನು ನೀಡಿದರು.

ಇಂದಿನ ಮಕ್ಕಳು ಹೊರಗಡೆಯ ಆಟಗಳನ್ನು ನಿಲ್ಲಿಸಿ, ಮನೆಯ ನಾಲ್ಕು ಗೋಡೆಗಳ ಮಧ್ಯೆ ಮೊಬೈಲ್‌ಗಳಲ್ಲಿಯ ಗೇಮ್‌ಗಳನ್ನು ಆಡುತ್ತಾ, ಬೇರೆಯವರೊಂದಿಗೆ ಬೆರೆಯದೇ, ಹೊರಗಿನ ಸುಂದರವಾದ ಪ್ರಪಂಚವನ್ನು ಮರೆತಿದ್ದಾರೆ. ಇಂತಹ ಮಕ್ಕಳಿಗೆ ಹಳ್ಳಿಯ ಸಂತೆಯನ್ನೆ ಇಂದು ರಂಗಾಯಣದ ಆವರಣದಲ್ಲಿ ಸೃಷ್ಟಿಸಿ, ಪ್ರಾಯೋಗಿಕವಾಗಿ ಮಕ್ಕಳಿಗೆ ಗ್ರಾಮೀಣ ಬದುಕು, ಖರೀದಿದಾರೊಂದಿಗೆ ಸಂಭಾಷಣೆ ಮಾಡುವ ಕೌಶಲ್ಯ ಹಾಗೂ ವ್ಯವಹಾರದ ಜ್ಞಾನವನ್ನು ನೀಡುವಲ್ಲಿ ಧಾರವಾಡ ರಂಗಾಯಣ ಯಶಸ್ವಿಯಾಯಿತು.

ಈ ಸಂದರ್ಭದಲ್ಲಿ ಶಿಬಿರದ ಸಂಚಾಲಕರಾದ ಅರುಣಕುಮಾರ ಮೇದಾರ, ತರಬೇತುದಾರರಾದ ರಾಜ್ ಕವಡೆನವರ, ಸಂಗೀತಗಾರರಾದ ಸುನಂದಾ ನಿಂಬನಗೌಡರ ಸೇರಿದಂತೆ ಇತರರು ಇದ್ದರು. ಅಲ್ಲದೇ ರಂಗಾಯಣದ ಕಲಾವಿದರು, ಮಕ್ಕಳು, ಪಾಲಕರು ರಂಗಾಯಣದ ಆವರಣದಲ್ಲಿ ರಂಗೋಲಿಗಳನ್ನು ಹಾಕಿ ಶೃಂಗರಿಸಿದರು. ರಂಗಾಯಣದ ರೆಪರ್ಟರಿ ಕಲಾವಿದರು ಸಂತೆಯಲ್ಲಿ ಕಳ್ಳತನ ಮಾಡುವುದು, ಪೊಲೀಸರು ಕಳ್ಳನ್ನು ಹಿಡಿಯುವುದು ಹಾಗೂ ರಂಗಾಯಣದ ಸಿಬ್ಬಂದಿ ಟ್ಯಾಕ್ಸ್ ಕೇಳುವ ದೃಶ್ಯಗಳು ನೈಜವೆಂಬಂತೆ ಮಕ್ಕಳಿಗೆ ನಿಜವಾದ ಸಂತೆಯ ವಾತಾವರಣವನ್ನು ಕಲ್ಪಿಸಿಕೊಡುವ ಮೂಲಕ ರಂಗಾಯಣದ ಮಕ್ಕಳ ಸಂತೆ ಹಾಗೂ ಜಾತ್ರೆಯು ಮನರಂಜನೆಯೊಂದಿಗೆ ಯಶಸ್ವಿಯಾಯಿತು.

# ಬಿ.ಆರ್.ಅವರು ಒಬ್ಬ ವಿಮರ್ಶಾತ್ಮಕ ಸಂಶೋಧಕ, ಹಳ್ಳಿ ಸೋಗಡಿನ ತಾಯಿಗರುಳಿನ ಪ್ರಾಧ್ಯಾಪಕರಾಗಿದ್ದರು




**ಬೆಳಗಾವಿ ವಾರ್ತೆ ಧಾರವಾಡ:** ಕರ್ನಾಟಕ ವಿಶ್ವವಿದ್ಯಾಲಯದ ಕನ್ನಡ ಪ್ರಾಧ್ಯಾಪಕರಾಗಿದ್ದ ಡಾ.ಬಿ.ಆರ್.ಹಿರೇಮಠ ಅವರು ತಾಯಿಗರುಳಿನ ಒರ್ವ ಶ್ರೇಷ್ಠ ಪ್ರಾಧ್ಯಾಪಕರಾಗಿದ್ದರು. ಅವರ ಸಂಶೋಧನೆ ಮತ್ತು ವಿಮರ್ಶಾತ್ಮಕ ಸಂಶೋಧನೆ ಕಾರ್ಯಗಳು ಇಂದಿನ ಸಂಶೋಧನೆ ಕಾರ್ಯಗಳಿಗೆ ಮಾದರಿ ಆಗಿವೆ ಎಂದು ಕನ್ನಡ ವಿಶ್ವವಿದ್ಯಾಲಯ ವಿಶ್ರಾಂತ ಕುಲಪತಿ ಡಾ.ಎ.ಮುರಿಗೆಪ್ಪ ಅವರು ಹೇಳಿದರು.

ಅವರು ಇಂದು ಬೆಳಿಗ್ಗೆ ಕರ್ನಾಟಕ ವಿದ್ಯಾವರ್ಧಕ ಸಂಘದ ರಾ.ಹ.ದೇಶಪಾಂಡೆ ಸಭಾಭವನದಲ್ಲಿ ಡಾ.ಬಿ.ಆರ್. ಹಿರೇಮಠ ಅಭಿಮಾನಿ ಬಳಗ ಆಯೋಜಿಸಿದ್ದ ಲಿಂ. ಡಾ.ಬಿ.ಆರ್.ಹಿರೇಮಠ ಅವರ ಸವಿನೆನಪು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ, ಮಾತನಾಡಿದರು.

ಡಾ.ಬಿ.ಆರ್.ಹಿರೇಮಠ ಅವರ ಹೆಸರಿನಲ್ಲಿ ಒಂದು ಟ್ರಸ್ಟ್ ರಚನೆ ಮಾಡಿ, ಬಿ.ಆರ್.ಅವರ ಸಾಧನೆ ಮತ್ತು ಸಾಹಿತ್ಯ, ಸಂಸ್ಕೃತಿ ಕಾರ್ಯಗಳನ್ನು ಮುಂದುವರಿಸಲು ನಿರ್ಧರಿಸಲಾಗಿದೆ. ಮುಂದಿನ ದಿನಗಳಲ್ಲಿ ಉತ್ತಮ ಸಂಶೋಧನೆಗಳಿಗೆ, ಸಂಶೋಧನಾ ವಿದ್ಯಾರ್ಥಿಗಳಿಗೆ ಡಾ.ಬಿ.ಆರ್.ಹಿರೇಮಠ ಅವರ ಹೇಸರಿನಲ್ಲಿ ಪ್ರಶಸ್ತಿ ನೀಡಲು ನಿರ್ಧರಿಸಲಾಗಿದೆ ಎಂದು ಡಾ.ಎ.ಮುರಿಗೆಪ್ಪ ಅವರು ತಿಳಿಸುದರು.

ಬಿ.ಆರ್.ಅವರ ಶಿಷ್ಯ ಬಳಗ ರಾಜ್ಯದ ವಿವಿಧ ಸಂಸ್ಥೆಗಳಲ್ಲಿ, ಕಾಲೇಜುಗಳಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ. ಅವರ ಸಹಕಾರದಲ್ಲಿ ಶೈಕ್ಷಣಿಕ, ಸಂಶೋಧನಾತ್ಮಕ ಕಾರ್ಯಾಗಾರಗಳನ್ನು ಆಯೋಜಿಸಲು ಚಿಜತಿಸಲಾಗಿದೆ. ಮತ್ತು ಅವರ ಸಂಶೋಧನಾತ್ಮಕ ಕೃತಿಗಳನ್ನು ಮುದ್ರಿಸಿ, ಪ್ರಕಟಿಸಲು ಯೋಜಿಸಲಾಗಿದೆ ಎಂದು ಅವರು ತಿಳಿಸಿದರು.

ಯುವ ಪ್ರಾಧ್ಯಾಪಕರಿಗೆ, ಸಂಶೋಧಕರಿಗೆ ತರಬೇತಿ ನೀಡುವ , ಹೊಸ ಸಂಶೋಧನಾ ಮಾದರಿಗಳನ್ನು ರೂಪಿಸಲು ಪ್ರೋತ್ಸಾಹಿಸುವ ಕಾರ್ಯಗಳನ್ನು ನೂತನ ಟ್ರಸ್ಟ್ ದಿಂದ ಹಮ್ಮಿಕೊಳ್ಳಲಾಗುತ್ತದೆ ಎಂದು ಡಾ.ಎ.ಮುರಿಗೆಪ್ಪ ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಹಂಪಿ ಕನ್ನಡ ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿ ಡಾ.ಮಲ್ಲಿಕಾ ಘಂಟಿ,

ಡಾ.ಬಿ.ಆರ್. ಅವರ ವಿದ್ಯಾರ್ಥಿಗಳಾದ ರಾಯಚೂರ ವಾಲ್ಮೀಕಿ ವಿಶ್ವವಿದ್ಯಾಲಯದ ಕುಲಪತಿ ಡಾ.ಶಿವಾನಂದ ಕೆಳಗಿನಮನಿ, ಸಾರ್ವಜನಿಕ ಶಿಕ್ಷಣ ಇಲಾಖೆಯ ವಿಶ್ರಾಂತ ಅಪರ ಆಯುಕ್ತ ಡಾ.ವೆಂಕಟೇಶ ಮಾಚಕನೂರ, ಡಾ.ಬಸವರಾಜ ಸಾದರ, ಡಾ.ವಿ.ಎಸ್.ಮಾಳಿ, ಡಾ.ಅಶೋಕ ನರೋಡೆ, ಡಾ.ಎಫ್.ಟಿ.ಹಳ್ಳಿಕೇರಿ, ಡಾ.ವೀರೇಶ ಬಡಿಗೇರ, ಡಾ.ಎಸ್.ಸಿ.ಪಾಟೀಲ, ಶೈಲಜಾ ಹೊಸಳ್ಳೇರ, ಸಂಶೋಧಕಿ ದಿ. ನೇತ್ರಾವತಿ ದೊಡಮನಿ ಅವರ ಪುತ್ರ ವಿಶಾಲ ಕುಲಕರ್ಣಿ ಅವರು ಮಾತನಾಡಿ, ಡಾ.ಬಿ.ಆರ್. ಹಿರೇಮಠ ಅವರ ಒಡನಾಟ, ಸಾಧನೆ ಮತ್ತು ಸಂಶೋಧನೆ, ಸಾಂಸ್ಕೃತಿಕ ಸೇವೆಗಳನ್ನು ಸ್ಮರಿಸಿದರು.

ಡಾ.ಬಿ.ಆರ್.ಹಿರೇಮಠ ಅವರ ಚಿರಂಜೀವಿ ಡಾ.ಮೃತ್ಯುಂಜಯ ಹಿರೇಮಠ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ಡಾ.ವೈ.ಎಂ.ಯಾಕೊಳ್ಳಿ ಅವರು ಕಾರ್ಯಕ್ರಮ ನಿರೂಪಿಸಿದರು. ಡಾ.ಬಿ.ಆರ್. ಸಹೋದರ ಶಿವಪೂಜಯ್ಯ ಹಿರೇಮಠ ಅವರು ವಂದಿಸಿದರು.

ಇದೇ ಸಂದರ್ಭದಲ್ಲಿ ಡಾ.ಬಿ.ಆರ್.ಹಿರೇಮಠ ಅವರ ಒಡನಾಡಿಗಳನ್ನು, ಸಹೋದ್ಯೋಗಿಗಳನ್ನು ಬಿ.ಆರ್. ಅವರ ಕುಟುಂಬದಿಂದ ಸನ್ಮಾನಿಸಿ, ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಅನುಷಾ (ಅಮ್ಮಣ್ಣಿ) ಹಿರೇಮಠ ದಾನಮ್ಮ ಶಿವಪೂಜಯ್ಯ ಹಿರೇಮಠ, ಡಾ.ವಿಜಯಕುಮಾರ ಕಟಗಿಹಳ್ಳಿಮಠ, ಡಾ. ಬಸವರಾಜ ಡೋಣೂರ, ಪ್ರೊ. ರವಿ ಹಿರೇಮಠ, ಡಾ.ಜಗದೀಶ ಕಾಡದೇವರಮಠ, ಡಾ.ಎಸ್.ಬಿ.ಹಿರೇಮಠ, ಡಾ.ಆರ್.ಬಿ.ಚಿಲುಮಿ, ಡಾ. ಚಂದ್ರಶೇಖರ ರೊಟ್ಟಿಗವಾಡ, ಡಾ.ಎಸ್.ಬಿ.ಸಾತಿಹಾಳ, ಡಾ.ಸಮಂಗಮೇಶ ಕಲ್ಯಾಣಿ, ಡಾ.ಮಲ್ಲಿಕಾರ್ಜುನ.ಕೆ. ಮತ್ತು ಡಾ.ಬಿ.ಆರ್.ಹಿರೇಮಠ ಅವರ ಸಹೋದ್ಯೋಗಿಗಳು, ಒಡನಾಡಿಗಳು, ಸಂಶೋಧನಾ ವಿದ್ಯಾರ್ಥಿಗಳು, ಶಿಷ್ಯಂದಿರು, ಬಿ.ಆರ್. ಅಭಿಮಾನಿಗಳು, ಕುಟುಂಬ ಸದಸ್ಯರು ಭಾಗವಹಿಸಿದ್ದರು.

# ರಂಗಾಯಣದ ನೂತನ ನಿರ್ದೇಶಕರಾಗಿ ಝುಕೀರ ನದಾಫ ಅಧಿಕಾರ ಸ್ವೀಕಾರ



**ಬೆಳಗಾವಿ ವಾರ್ತೆ ಧಾರವಾಡ:** ಎಪ್ರೀಲ್ 27 ರಂದು ರಂಗನಿರ್ದೇಶಕರಾದ ಝುಕೀರ ನದಾಫ ಅವರು ಧಾರವಾಡ ರಂಗಾಯಣದ ನೂತನ ನಿರ್ದೇಶಕರಾಗಿ ಅಧಿಕಾರವನ್ನು ಸ್ವೀಕರಿಸಿದರು. ರಂಗಾಯಣದ ಆಡಳಿತಾಧಿಕಾರಿಗಳಾದ ಶಶಿಕಲಾ ಹುಡೇದ ಅವರು ನಿರ್ದೇಶಕರಿಗೆ ಪುಸ್ತಕ ಹಾಗೂ ಹೂಗುಚ್ಛ ನೀಡಿ ಸ್ವಾಗತಿಸಿದರು. ಈ ಸಂದರ್ಭದಲ್ಲಿ ಅವರ ಕುಟುಂಬ ವರ್ಗದವರು, ರಂಗಾಯಣ ರೆಪರ್ಟರಿ ಕಲಾವಿದರು, ಸಿಬ್ಬಂದಿಗಳು ಹಾಗೂ ರಂಗಭೂಮಿ ಕಲಾವಿದರು ಸೇರಿದಂತೆ ಅವರ ಆಪ್ತ ಬಳಗದವರು ಉಪಸ್ಥಿತರಿದ್ದರು.

ಮೂಲತಃ ಬೆಳಗಾವಿ ಜಿಲ್ಲೆಯ ಸವದತ್ತಿ ತಾಲೂಕಿನವರಾದ ಇವರು ಡಿಪ್ಲೋಮಾ ಇನ್ ಮೆಕ್ಯಾನಿಕಲ್ ಇಂಜಿನಿಯರಿಂಗ್ ಪದವಿಯನ್ನು ಪಡೆದಿದ್ದಾರೆ. 1978ರಲ್ಲಿ ರಂಗಭೂಮಿಯನ್ನು ಪ್ರವೇಶಿಸಿದರು. ಸಂಗೀತದಲ್ಲಿ ಆಸಕ್ತಿ ಹೊಂದಿದ ಇವರು 150ಕ್ಕೂ ಹೆಚ್ಚು ಭಕ್ತಿ ಗೀತೆಗಳು ಧ್ವನಿಸುರುಳಿಗಳಿಗೆ ಸಾಹಿತ್ಯ ರಚನೆ, ರಾಗ ಸಂಯೋಜನೆ ಹಾಗೂ ಗಾಯನ ಮಾಡಿದ್ದಾರೆ. ಮುತ್ತಾಳಗುಂಡಾ, ಉಂಡಾಡಿ ಗುಂಡಾ ಸಂಪತ್ತು ಕಂಡಾ, ಗುಂಡಾ ಭಂಡನಲ್ಲ ಪ್ರಚಂಡಾ ಸೇರಿದಂತೆ 07 ವೃತ್ತಿರಂಗ ಶೈಲಿಯ ನಾಟಕಗಳನ್ನು ರಚಿಸಿ ನಿರ್ದೇಶಿಸಿ ನಟಿಸಿದ್ದಾರೆ. ಬದುಕು ಬಂಗಾರವಾಯಿತು, ಮನೆಗೆ ತಕ್ಕ ಮಗ, ಬಂಗಾರದ ಲಿಂಗ, ಕಲಿತ ಕಳ್ಳ ಸೇರಿದಂತೆ 08 ವೃತ್ತಿರಂಗದ ನಾಟಕಗಳಲ್ಲಿ ನಟಿಸಿದ್ದಾರೆ. ಹಸ್ತಾಂತರ, ಬಿಳುಪಿನ ಹೆಣ, ಮಣ್ಣು, ಕಲ್ಲೂರ ವಾಡೆದಾಗ, ಬೀರವ್ವನ ಬಾಳೆಹಣ್ಣು ಸೇರಿದಂತೆ 22 ಹವ್ಯಾಸಿ ನಾಟಕಗಳನ್ನು ರಚಿಸಿ, ನಿರ್ದೇಶಿಸಿದ್ದಾರೆ. 12 ಹವ್ಯಾಸಿ ನಾಟಕಗಳನ್ನು ಹಾಗೂ 10 ಹವ್ಯಾಸಿ ನಾಟಕಗಳಲ್ಲಿ ನಟಿಸಿದ್ದಾರೆ. ದಾರಿಯು ವೈಕುಂಠಕೆ, ಗುಲಾಮನ ಸ್ವಾತಂತ್ರ್ಯ ಯಾತ್ರೆ, ಗಾಂಧಿಯ ಅಂತಿಮ ದಿನಗಳು, ಉದ್ಭವ, ಮೃಚ್ಛಕಟ್ಟಿಕ ನಾಟಕಗಳಿಗೆ ಸಂಗೀತ ನೀಡಿದ್ದಾರೆ.

1993 ರಿಂದ 2003 ರವರೆಗೆ ರಂಗಸಂಪದದಲ್ಲಿ ನಟನಾಗಿ, 1997 ರಿಂದ ಸವದತ್ತಿಯ ರಂಗ ಆರಾಧನಾ ಸಾಂಸ್ಕೃತಿಕ ಸಂಘಟನೆಯ ಸಂಸ್ಥಾಪನ ಸದಸ್ಯನಾಗಿ ಕಾರ್ಯನಿರ್ವಹಿಸಿದ್ದಾರೆ. ದೂರದರ್ಶನದಲ್ಲಿ ಮಿಂಚು ಹಾಗೂ ವಾಸಾಂಶಿ ಜೀಣಾರ್ಣಿ ನಾಟಕಗಳಲ್ಲಿ ಹಾಗೂ ಸಂಗವ್ವನ ಕಥೆ ಕಿರು ಚಲನಚಿತ್ರದಲ್ಲಿ ಅಭಿನಯಿದ್ದಾರೆ. ಆಕಾಶವಾಣಿಯಲ್ಲಿ ಮೆಟ್ಟಲಲೇರುವ ಗಡಿಬಿಡಿಯಲ್ಲಿ ಮರೆತವರು, ಕಿತ್ತೂರು ಚೆನ್ನಮ್ಮ, ಗತಿ, ನಮ್ದು ಹಳೆ ಕಥಿ, ಬಾಸಿಂಗ ಬಲ ನಾಟಕಗಳ ನಿರ್ದೇಶನ ಮಾಡಿದ್ದಾರೆ.

2019ರ ಕರ್ನಾಟಕ ನಾಟಕ ಅಕಾಡೆಮಿಯ ಪ್ರಶಸ್ತಿ, ಬೆಳಗಾವಿಯ ರಂಗಸಂಪದ ದಿಂದ 2019ರ ರಂಗಸಖ ಪ್ರಶಸ್ತಿ, ಬೆಂಗಳೂರಿನ ಬೀದಿ ನಾಟಕ ಅಕಾಡೆಮಿಯಿಂದ 2020ರ ಸಿಜಿಕೆ ನಾಟಕ ಪ್ರಶಸ್ತಿ, ಕರ್ನಾಟಕ ವಿದ್ಯಾವರ್ಧಕ ಸಂಘ ಧಾರವಾಡ ಇವರಿಂದ 2011ರ ರಂಗಗೌರವ, ಬೆಳಗಾವಿಯ ರಂಗ ಸೃಷ್ಟಿ ಇವರಿಂದ 2024ರ ರಂಗಸಮ್ಮಾನ, ಯುವ ಕರ್ನಾಟಕ ರಕ್ಷಣಾ ವೇದಿಕೆ ಬೆಳಗಾವಿ ಇವರಿಂದ 2024ರ ಬೆಳಗಾವಿ ರತ್ನ ಪ್ರಶಸ್ತಿ, ಡಾಕ್ಟರ್ ಬಿಎಸ್ ಗವಿಮಠ ಪ್ರತಿಷ್ಠಾನ ಬೆಳಗಾವಿ ಇವರಿಂದ 2025ರ ರಂಗ ಚೇತನ ಪ್ರಶಸ್ತಿ, ಧಾರವಾಡದ ಅಭಿನಯ ಭಾರತಿ ಇವರಿಂದ 2025ರ ಅಭಿನಯ ಭಾರತಿ ರಂಗ ಪ್ರಶಸ್ತಿಗಳನ್ನು ಪಡೆದಿದ್ದಾರೆ.

# ಸಾರ್ವಜನಿಕ ಪ್ರದೇಶದಲ್ಲಿ ತಂಬಾಕು ಉತ್ಪನ್ನಗಳ ಬಳಕೆ ಮಾಡಿದ್ದಲ್ಲಿ ರೂ. 200 ಬದಲು ರೂ. 1000 ದಂಡ ವಿಧಿಸುವ ಕುರಿತು ಪೊಲೀಸ್ ಇಲಾಖೆ ಪ್ರಕಟಣೆ

**ಬೆಳಗಾವಿ ವಾರ್ತೆ ಧಾರವಾಡ:** ಸಿಗರೇಟು ಮತ್ತು ಇತರ ತಂಬಾಕು ಉತ್ಪನ್ನಗಳ (ಜಾಹಿರಾತು ನಿಷೇಧ ಮತ್ತು ವ್ಯಾಪಾರ ಮತ್ತು ವಾಣಿಜ್ಯ ಉತ್ಪಾದನೆ, ಸರಬರಾಜು ಮತ್ತು ವಿತರಣೆಯ ವಿನಿಯಮನ) (ಕರ್ನಾಟಕ ತಿದ್ದುಪಡಿ) ಅಧಿನಿಯಮ, 2024 ರಲ್ಲಿ 21 ರ ಅಡಿ ಕಲಂ 4 ರಲ್ಲಿ ಸಾರ್ವಜನಿಕ ಸ್ಥಳದಲ್ಲಿ ತಂಬಾಕು ಉತ್ಪನ್ನಗಳ ಬಳಕೆಯು ನಿಷೇಧಿಸಲಾಗಿದೆ. ಯಾರೇ ವ್ಯಕ್ತಿಯು ಸಾರ್ವಜನಿಕ ಸ್ಥಳದಲ್ಲಿ ತಂಬಾಕು ಉತ್ಪನ್ನವನ್ನು ಬಳಸತಕ್ಕದ್ದಲ್ಲ. ಬಳಿಸಿದ್ದಲ್ಲಿ ಎರಡು ನೂರು ರೂಪಾಯಿಗಳವರೆಗೆ ಇದ್ದ ದಂಡ (ಜುಲ್ಮಾನೆಯ)ದ ಬದಲಾಗಿ ಒಂದು ಸಾವಿರ ರೂಪಾಯಿಗಳವರೆಗೆ ದಂಡ (ಜುಲ್ಮಾನೆ) ವನ್ನು ವಿಧಿಸಲಾಗುವುದು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ ಅವರು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, 21 ಎ ರ ಅಡಿ ಕಲಂ 4ಎ (ಹುಕ್ಕಾ ಬಾರ್ ನಡೆಸುವುದಕ್ಕಾಗಿ ದಂಡನೆ) ಪ್ರಕರಣದ ಉಪಬಂಧಗಳನ್ನು ಉಲ್ಲಂಘಿಸುವ ಯಾರೇ ವ್ಯಕ್ತಿಯು, ಒಂದು ವರ್ಷಕ್ಕೆ ಕಡಿಮೆಯಿಲ್ಲದ ಆದರೆ ಮೂರು ವರ್ಷಗಳಿಗೆ ವಿಸ್ತರಿಸಬಹುದಾದ ಅವಧಿಗೆ ಕಾರಗೃಹ ವಾಸ ಮತ್ತು 50 ಸಾವಿರ ರೂಪಾಯಿಗಳಿಗಿಂತ ಕಡಿಮೆಯಿಲ್ಲದ ಆದರೆ 01 ಲಕ್ಷ ರೂಪಾಯಿಗಳವರೆಗೆ ವಿಸ್ತರಿಸಬಹುದಾದ ದಂಡ (ಜುಲ್ಮಾನೆ) ವನ್ನು ವಿಧಿಸಲಾಗುತ್ತದೆ.

24 ರ ಅಡಿ ಕಲಂ 6ಎ ರಲ್ಲಿ ತಿಳಿಸಿರುವಂತೆ, ಇಪ್ಪತ್ತೊಂದು ವರ್ಷಗಳಿಗಿಂತ ಕಡಿಮೆ ವಯಸ್ಸಿನ ವ್ಯಕ್ತಿಗೆ ಮತ್ತು ನಿರ್ದಿಷ್ಟ ಪ್ರದೇಶದಲ್ಲಿ ಸಿಗರೇಟು ಅಥವಾ ಇತರ ತಂಬಾಕು ಉತ್ಪನ್ನಗಳ ಮಾರಾಟದ ಮೇಲೆ ನಿಷೇಧವಿದೆ. ಯಾರೇ ವ್ಯಕ್ತಿಯು ಇಪ್ಪತ್ತೊಂದು ವರ್ಷಕ್ಕಿಂತ ಕಡಿಮೆ ವಯಸ್ಸಿನ ಯಾರೇ ವ್ಯಕ್ತಿಗೆ, ಯಾವುದೇ ಶಿಕ್ಷಣ ಸಂಸ್ಥೆಯ ಒಂದು ನೂರು ಮೀಟರ್ ಸುತ್ತಳತೆಯೊಳಗಿನ ಪ್ರದೇಶದೊಳಗೆ ಅಥವಾ ಬಿಡಿಯಾಗಿ ಅಥವಾ ಒಂಟಿ ಕಟ್ಟಿಯಾಗಿ ಸಿಗರೇಟು ಅಥವಾ ಯವುದೇ ಇತರ ತಂಬಾಕು ಉತ್ಪನ್ನದ ಮಾರಾಟ ಮಾಡತಕ್ಕದ್ದಲ್ಲ. ಮತ್ತು ಮಾರಾಟಕ್ಕೆ ಇಡತಕ್ಕದ್ದಲ್ಲ ಅಥವಾ ಮಾರಾಟಕ್ಕೆ ಅನುಮತಿ ನೀಡತಕ್ಕದ್ದಲ್ಲ. ಉಲ್ಲಂಘನೆಯಾದಲ್ಲಿ ಒಂದು ಸಾವಿರ ರೂಪಾಯಿಗಳವರೆಗೆ ದಂಡ (ಜುಲ್ಮಾನೆ) ವನ್ನು ವಿಧಿಸಲಾಗುವುದು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಮಾಜ ಕಲ್ಯಾಣ ಇಲಾಖೆಯ ಗಜೇಂದ್ರಗಡದ ಕಿತ್ತೂರು ರಾಣಿ ಚನ್ನಮ್ಮ ವಸತಿ ಶಾಲೆ ವಿದ್ಯಾರ್ಥಿನಿಯ ಅಮೋಘ ಸಾಧನೆ



**ಬೆಳಗಾವಿ ವಾರ್ತೆ ಗದಗ:** ಸಮಾಜ ಕಲ್ಯಾಣ ಇಲಾಖೆಯ ಕಿತ್ತೂರ ರಾಣಿ ಚನ್ನಮ್ಮ ವಸತಿ ಶಾಲೆಯ ವಿದ್ಯಾರ್ಥಿನಿಯಾದ ಕುಮಾರಿ ಸುಷ್ಮಾ ತಾವರೇಪ್ಪ ನಾಯಕ, ಈ ವಿದ್ಯಾರ್ಥಿ 2026ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಯಲ್ಲಿ 625 ಅಂಕಗಳಿಗೆ 620 ಅಂಕಗಳನ್ನು ಗಳಿಸಿ, ಶೇ 99.20 ಪ್ರತಿಶತ ಗಳಿಸಿ ಜಿಲ್ಲೆಗೆ ತೃತೀಯ ಸ್ಥಾನವನ್ನು ಪಡೆದು, ಸದರಿ ವಸತಿ ಶಾಲೆಗೆ ಹಾಗೂ ಇಲಾಖೆಗೆ ಕೀರ್ತಿ ತಂದಿದ್ದಾಳೆ. ವಿದ್ಯಾರ್ಥಿನಿಯ ಈ ಸಾಧನೆಗಾಗಿ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ಡಾ.ನಂದಾ ಹಣಬರಟ್ಟಿ ಇವರು ಸನ್ಮಾನಿಸಿದರು. ವಿದ್ಯಾರ್ಥಿನಿಯ ಈ ಸಾಧನೆಗೆ ಹರ್ಷ ವ್ಯಕ್ತಪಡಿಸಿದ ಅವರು ಇಂತಹ ಸಾಧನೆಗಳು ಎಲ್ಲ ವಸತಿ ಶಾಲೆಗಳಲ್ಲಿ ಮುಂದುವರೆಯಲಿ ಎಂದು ಶುಭಾಶಯ ಕೋರಿದರು.

ಈ ಸಂದರ್ಭದಲ್ಲಿ ಸಮಾಜ ಕಲ್ಯಾಣ ಇಲಾಖೆ ಸಿಬ್ಬಂದಿಗಳು, ಕಿತ್ತೂರ ರಾಣಿ ಚನ್ನಮ್ಮ ವಸತಿ ನಿಲಯದ ಪ್ರಾಂಶುಪಾಲರಾದ ಶರಣಪ್ಪ ಕರ್ಜಗಿ, ವಿದ್ಯಾರ್ಥಿನಿಯ ಪಾಲಕರು ಉಪಸ್ಥಿತರಿದ್ದರು.

# 2026ನೇ ಸಾಲಿನ ಐ.ಟಿ.ಐ ಪ್ರವೇಶ ಪ್ರಾರಂಭ

ಗದಗ: ವಿರುಪಾಕ್ಷಪ್ಪ ಉಳವಪ್ಪ ಬೆಟಗೇರಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ಕುರ್ತಕೋಟಿ ತಾ:ಜಿ:ಗದಗ ಇಲ್ಲಿ ಎಸ್.ಎಸ್.ಎಲ್.ಸಿ. ಉತ್ತೀರ್ಣರಾದವರಿಗೆ ಫಿಟ್ಟರ ಮತ್ತು ಎಲೆಕ್ಟ್ರೀಶಿನ ವೃತ್ತಿಗಳಿಗೆ ಅಗಷ್ಟ-2026 ನೇ ಸಾಲಿಗೆ ಐ.ಟಿ.ಐ ಪ್ರವೇಶಕ್ಕಾಗಿ (ಸಿಟಿಎಸ್ ವಿಭಾಗ) ಅರ್ಹತೆ ಮತ್ತು ಮೀಸಲಾತಿ ಆಧಾರದ ಮೇಲೆ (ಮೆರಿಟ್ ಕಮ್ ರಿಸರ್ವೇಷನ್) ಆನಲೈನ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ ಅರ್ಜಿ ಸಲ್ಲಿಸಲು ಎಪ್ರಿಲ್ 27 ರಿಂದ ಮೇ 08 ರವರೆಗೆ ಅವಕಾಶ ಇರುತ್ತದೆ.

ಸಂಸ್ಥೆಯು ಕೇಂದ್ರ ಸರ್ಕಾರದ ರಾಷ್ಟ್ರೀಯ ವೃತ್ತಿ ಶಿಕ್ಷಣ ಪರಿಷತ್ (ಎನ್.ಸಿ.ವಿ.ಟಿ)ಗೆ ಸಂಯೋಜನೆಗೊಂಡಿದೆ. ಫಿಟ್ಟರ ಮತ್ತು ಎಲೆಕ್ಟ್ರೀಶಿಯನ ಎರಡು ವರ್ಷದ ಅವಧಿಯ ವೃತ್ತಿಗಳನ್ನು ಹೊಂದಿರುತ್ತದೆ.

ಹಾಗೂ ಸುಸಜ್ಜಿತ ಕಟ್ಟಡ, ಪ್ರಯೋಗಾಲಯ, ಗ್ರಂಥಾಲಯ ಹಾಗೂ ಕಂಪ್ಯೂಟರ ಲ್ಯಾಬನ್ನು ಹೊಂದಿರುತ್ತದೆ ಮತ್ತು ಉತ್ತಮ ತರಬೇತಿ ನೀಡುವ ನುರಿತ ಶಿಕ್ಷಕರ ಸೌಲಭ್ಯವುಳ್ಳ ಸಂಸ್ಥೆಯಾಗಿದೆ. ಅರ್ಜಿಗಳನ್ನು ಆನಲೈನಲ್ಲಿ ಅರ್ಜಿ ಸಲ್ಲಿಸಲು ವೆಬ್‌ಸೈಟ್ ವಿಳಾಸ: WWW.cite.karnataka.gov.in ವೆಬ್‌ಸೈಟ್ ವಿಳಾಸದಲ್ಲಿ ಸಲ್ಲಿಸಲು ಪ್ರಕಟಣೆಯಲ್ಲಿ ತಿಳಿಸಿದೆ.

# ಕೇಂದ್ರ ಸರ್ಕಾರದ ಜ್ಞಾನ ಭಾರತಂ ಮಿಷನ್ ಯೋಜನೆಯಡಿಯಲ್ಲಿ ಜಿಲ್ಲೆಯಲ್ಲಿ ಲಭ್ಯವಿರುವ ಹಳೆಯ ಕೈಬರಹದ ಪತ್ಯಗಳು, ಹಸ್ತಪ್ರತಿಗಳು ಮತ್ತು ದಾಖಲೆಗಳ ಸಂಗ್ರಹ; ಸಾರ್ವಜನಿಕರು ಸಹಕಾರ ನೀಡಲು ಜಿಲ್ಲಾಧಿಕಾರಿ ಸ್ನೇಹಲ್ ಆರ್. ಮನವಿ

**ಬೆಳಗಾವಿ ವಾರ್ತೆ ಧಾರವಾಡ:** ಕೇಂದ್ರ ಸರ್ಕಾರದ ಜ್ಞಾನ ಭಾರತಂ ಮಿಷನ್ ಯೋಜನೆಯಡಿಯಲ್ಲಿ ರಾಷ್ಟ್ರದಾದ್ಯಂತ ಲಭ್ಯವಿರುವ ಶತಮಾನ ಗಳಷ್ಟು ಹಳೆಯ ಕೈಬರಹದ ಪತ್ಯಗಳು, ಹಸ್ತಪ್ರತಿಗಳು ಮತ್ತು ದಾಖಲೆಗಳನ್ನು ಸಂಗ್ರಹಿಸಿ, ಇಂದಿನ ತಂತ್ರಜ್ಞಾನ ಮೂಲಕ ಶಾಶ್ವತವಾಗಿ ಉಳಿಸಲು ಅವುಗಳ ಸಮೀಕ್ಷೆ ಕಾರ್ಯ ಕೈಗೊಳ್ಳಲಾಗುತ್ತಿದೆ. ಸಾರ್ವ ಜನಿಕರು ತಮ್ಮಲ್ಲಿ ಇಂತಹ ಹಳೆಯ ಕೈಬರ ಹ, ಹಸ್ತಪ್ರತಿ, ದಾಖಲೆಗಳು ಲಭ್ಯವಿದ್ದರೆ ಮಾಹಿತಿ ನೀಡಿಬೇಕು. ಸಮೀಕ್ಷೆದಾರರು ತಮ್ಮಲ್ಲಿಗೆ ಬಂದು ದಾಖಲಿಸಿಕೊಳ್ಳುತ್ತಾರೆ ಎಂದು ಜಿಲ್ಲಾಧಿಕಾರಿ ಸ್ನೇಹಲ್ ಆರ್. ಅವರು ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಕೇಂದ್ರ ಸರಕಾರದ ಜ್ಞಾನ ಭಾರತಂ ಮಿಷನ್ ಯೋಜನೆಯು ಮಹತ್ವದ್ದಾಗಿದೆ. ಜಿಲ್ಲೆಯಾದ್ಯಂತ ಲಭ್ಯವಿರುವ ಶತಮಾನಗಳಷ್ಟು ಹಳೆಯ ಕೈಬರಹದ ಪತ್ಯಗಳು, ಹಸ್ತಪ್ರತಿಗಳು ಮತ್ತು ದಾಖಲೆಗಳನ್ನು ಸಂಗ್ರಹಿಸಿ, ಇಂದಿನ ತಂತ್ರಜ್ಞಾನ ಮೂಲಕ ಶಾಶ್ವತವಾಗಿ ಉಳಿಸಲು ಅವುಗಳ ಸಮೀಕ್ಷೆ ಕಾರ್ಯ ಕೈಗೊಳ್ಳಲಾಗುತ್ತಿದೆ.

ಐತಿಹಾಸಿಕ ದಾಖಲೆಗಳ ಸಮೀಕ್ಷೆ, ಸಂರಕ್ಷಣೆ, ರಕ್ಷಣೆ, ಡಿಜಿಟಲೀಕರಣ, ನೋಂದಣಿ, ವಿಮರ್ಶಾತ್ಮಕ ಸಂಪಾದನೆ, ಅನುವಾದ ಮತ್ತು ಪ್ರಕಟಣೆಯನ್ನು ಮಾಡುವ ಮೂಲಕ ಕರ್ನಾಟಕದ ಶ್ರೀಮಂತ ಸಾಂಸ್ಕೃತಿಕ ಪರಂಪರೆಯನ್ನು ಒಂದೇ ರಾಷ್ಟ್ರೀಯ ವೇದಿಕೆಯ ಮೂಲಕ ಸಾರ್ವಜನಿಕರಿಗೆ ಒದಗಿಸಲಾಗುತ್ತದೆ.

ಭವಿಷ್ಯದ ಪೀಳಿಗೆಗೆ ಅವುಗಳ ಜ್ಞಾನ ಸಂಪತ್ತಿನ ಸಂರಕ್ಷಣೆ ಮತ್ತು ಬಳಕೆಗೆ ಹಸ್ತಪ್ರತಿಗಳ ಸಂರಕ್ಷಣೆ ಹಾಗೂ ಡಿಜಿಟಲೀಕರಣ ಯೋಜನೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಕೇಂದ್ರ ಸರ್ಕಾರದ ಜ್ಞಾನ ಭಾರತಂ ಮಿಷನ್ ಯೋಜನೆಯಡಿ ಇಡೀ ದೇಶದಲ್ಲಿರುವ ಹಸ್ತಪ್ರತಿಗಳ ಮಾಹಿತಿಯನ್ನು ಅಭಿವೃದ್ಧಿಪಡಿಸಿರುವ ಮೊಬೈಲ್ ಅಪ್ಲಿಕೇಷನ್ನಲ್ಲಿ ಕೇಂದ್ರ ಸರ್ಕಾರವು ಅಪ್ಲೋಡ್ ಮಾಡುವ (National Repository) ದತ್ತಾಂಶದ ಮಾಹಿತಿಯನ್ನು ವಿಶ್ವಕ್ಕೆ ಹಂಚಿಕೊಳ್ಳುವ ಉದ್ದೇಶದಿಂದ ಈ ಯೋಜನೆಯನ್ನು ಜಾರಿಗೊಳಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

ಈ ಮಹತ್ವ ಪೂರ್ಣವಾದ ಜ್ಞಾನ ಭಾರತಂ ಮಿಷನ್ ಯೋಜನೆಯೊಂದಿಗೆ ರಾಜ್ಯ ಸರ್ಕಾರವು ಕೈಜೋಡಿಸುವ ಸಲುವಾಗಿ ರಾಜ್ಯದಾದ್ಯಂತ ಹಸ್ತಪ್ರತಿಗಳ ಸಮೀಕ್ಷ ಕಾರ್ಯವನ್ನು ಪ್ರಾರಂಭಿಸಿ, ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಯೋಜನೆಯ ಸಮನ್ವಯವನ್ನು ಸುಗಮಗೊಳಿಸಲು, ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ರಾಜ್ಯ ಮಟ್ಟದ ಸ್ಥಾಯಿ ಸಮಿತಿಯನ್ನು ಮತ್ತು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಟ್ಟದ ಸಮಿತಿಯನ್ನು ರಚನೆ ಮಾಡಿ ಸರ್ಕಾರದಿಂದ ಆದೇಶ ಹೊರಡಿಸಲಾಗಿದೆ. ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯ ಜಿಲ್ಲಾ ಮಟ್ಟದ ಸಮಿತಿಯು ಮೇಲ್ವಿಚಾರಣೆ ಮಾಡುತ್ತದೆ.

ನಮ್ಮ ಜಿಲ್ಲೆಯಲ್ಲಿನ ವಿಶ್ವವಿದ್ಯಾಲಯಗಳು, ವಸ್ತುಸಂಗ್ರಹಾಲಯಗಳು, ಸಂಘ-ಸಂಸ್ಥೆಗಳು, ಮಠಗಳು ಮತ್ತು ವ್ಯಕ್ತಿಗಳ ಬಳಿ ಇರುವಂತಹ ಹಸ್ತಪ್ರತಿಗಳನ್ನು ದಾಖಲೀಕರಣಗೊಳಿಸಬೇಕಾಗಿದೆ. ಈ ಮಹತ್ವದ ಕಾರ್ಯಕ್ಕೆ ಎಲ್ಲ ಶೈಕ್ಷಿಕ ಸಂಸ್ಥೆಗಳು, ಖಾಸಗಿ ಸಂಶೋಧನಾ ಕೇಂದ್ರಗಳು, ಸಂಘ, ಸಂಸ್ಥೆಗಳು, ಮಠಗಳು ಮತ್ತು ದಾಖಲೆ ಹೊಂದಿರುವ ವ್ಯಕ್ತಿ, ಕುಟುಂಬಗಳು ಜಿಲ್ಲಾಡಳಿತದೊಂದಿಗೆ ಕೈ ಜೋಡಿಸುವ ಅಗತ್ಯವಿದೆ. ಎಲ್ಲರೂ ಸಹಕಾರ ನೀಡಬೇಕೆಂದು ಜಿಲ್ಲಾಧಿಕಾರಿ ಸ್ನೇಹಲ್. ಆರ್.ಅವರು ಮನವಿ ಮಾಡಿದ್ದಾರೆ.

ಜ್ಞಾನ ಭಾರತಂ ಮಿಷನ್ ಯೋಜನೆಯ ಜಿಲ್ಲಾ ಸಂಯೋಜಕರು: ಕೇಂದ್ರ ಸರ್ಕಾರದ ಜ್ಞಾನ ಭಾರತಂ ಮಿಷನ್ ಯೋಜನೆಯಡಿಯಲ್ಲಿ ಜಿಲ್ಲೆಯಾದ್ಯಂತ ಲಭ್ಯವಿರುವ ಶತಮಾನಗಳಷ್ಟು ಹಳೆಯ ಕೈಬರಹದ ಪತ್ಯಗಳು, ಹಸ್ತಪ್ರತಿಗಳು ಮತ್ತು ದಾಖಲೆಗಳನ್ನು ಸಂಗ್ರಹಿಸಿ, ಇಂದಿನ ತಂತ್ರಜ್ಞಾನ ಮೂಲಕ ಶಾಶ್ವತವಾಗಿ ಉಳಿಸಲು ಅವುಗಳ ಸಮೀಕ್ಷೆ ಕಾರ್ಯ ಕೈಗೊಳ್ಳಲಾಗುತ್ತಿದೆ. ಈ ಕಾರ್ಯದ ಜಿಲ್ಲಾ ಸಂಯೋಜಕರಾಗಿ ವಿದ್ವಾನ್ ಬಸವರಾಜ ಆರೇರ್ (ಮೊ:08762724469), ಡಾ. ಶ್ರೀಧರ ಇನಾಮದಾರ್ (ಮೋ:9449742466) ಹಾಗೂ ಜಿಲ್ಲಾ ಸಮಿತಿಯ ಸದಸ್ಯರಾಗಿ ಡಾ.ಗಿರೀಧರ ಕಿನ್ನಾಳ (ಮೋ. 8317428204), ಪಂಡಿತ ಪೂರ್ಣಪ್ರಜ್ಞಾ ಮಳಗಿ (ಮೋ.8277077111), ಡಾ. ವೆಂಕಟೇಶ ಆಚಾರ್ಯ ಬಿ.ಡಿ.(ಮೋ.9448863064) ಹಾಗೂ ಡಾ. ಪದ್ಮಾವತಿ ಎಂ. ಸಿಂಗರಿ (ಮೋ.9035919598) ಇವರನ್ನು ಸರ್ಕಾರ ನೇಮಿಸಿದ್ದು, ಸಾರ್ವಜನಿಕರು ತಮ್ಮಲ್ಲಿರುವ ಹಳೆಯ ಕೈಬರಹದ ಪತ್ಯಗಳು, ಹಸ್ತಪ್ರತಿಗಳು ಮತ್ತು ದಾಖಲೆಗಳ ಬಗ್ಗೆ ಮಾಹಿತಿ ನೀಡಬೇಕೆಂದು ಎಂದು ಜಿಲ್ಲಾಧಿಕಾರಿ ಸ್ನೇಹಲ್ ಆರ್. ಅವರು ತಿಳಿಸಿದ್ದಾರೆ.

**ಜ್ಞಾನ ಭಾರತಂ ಮಿಷನ್ ಯೋಜನೆಯ ಉದ್ದೇಶ:** ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ, ಬೆಂಗಳೂರು, ಸಂಸ್ಕೃತಿ ಪ್ರತಿಷ್ಠಾನ, ಮೈಸೂರು, ಸಂಸ್ಥೆಗಳನ್ನು ಕ್ಲಸ್ಟರ್ ಕೇಂದ್ರಗಳಾಗಿ ಮತ್ತು ತಾರಾ ಪ್ರಕಾಶನ, ಬೆಂಗಳೂರು, ಇವರನ್ನು ಸ್ವತಂತ್ರ ಕೇಂದ್ರವನ್ನಾಗಿ ಆಯ್ಕೆಗೊಂಡು ಕೇಂದ್ರ ಸರ್ಕಾರದ ಜ್ಞಾನ ಭಾರತಂ ಮಿಷನ್ ಯೋಜನೆಯಡಿ ಒಡಂಬಡಿಕೆ (ಒಆಗ) ಮಾಡಿಕೊಂಡಿದ್ದಾರೆ.

ಅಲ್ಲದೇ, ಪುರಾತತ್ವ ವಸ್ತುಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಯನ್ನು ರಾಜ್ಯ ಮಟ್ಟದಲ್ಲಿ ನೋಡಲ್ ಇಲಾಖೆಯನ್ನಾಗಿ ಆಯ್ಕೆಗೊಳಿಸಿ ಜ್ಞಾನ ಭಾರತಂ ಮಿಷನ್ನೊಂದಿಗೆ ಒಡಂಬಡಿಕೆ (ಒಆಗ) ಮಾಡಿಕೊಳ್ಳಲಾಗಿದೆ.

ಆದುದರಿಂದ, ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ರಚನೆಯಾಗುವ ಸಮಿತಿಯಿಂದ ತಮ್ಮ ಜಿಲ್ಲೆಗಳಲ್ಲಿ ವಿಶ್ವವಿದ್ಯಾಲಯಗಳು, ಸಂಘ-ಸಂಸ್ಥೆಗಳು, ಮಠಗಳು ಮತ್ತು ವ್ಯಕ್ತಿಗಳ ಬಳಿ ಇರುವಂತಹ ಹಸ್ತಪ್ರತಿಗಳನ್ನು ಮೊಬೈಲ್ ಅಪ್ಲಿಕೇಷನ್ ಮುಖಾಂತರ ಅಪ್ಲೋಡ್ ಮಾಡಲು ಜನಸಾಮಾನ್ಯರಲ್ಲಿ ಕೋರಲಾಗಿದೆ.

ಮುಖ್ಯವಾಗಿ 3 ಕ್ಲಸ್ಟರ್ ಕೇಂದ್ರಗಳಿಂದ ಪ್ರತಿಯೊಂದು ಜಿಲ್ಲೆಗೆ ತಮ್ಮ ಸಮೀಕ್ಷೆದಾರರನ್ನು ನೇಮಕ ಮಾಡಿರುತ್ತಾರೆ. ಸಮೀಕ್ಷೆದಾರ ಮುಖಾಂತರ ಹಸ್ತಪ್ರತಿಗಳ ಸಮೀಕ್ಷೆ ಕಾರ್ಯವನ್ನೂ ಸಹ ಶೀಘ್ರದಲ್ಲಿಯೇ ಕೈಗೊಳ್ಳಲಾಗುವುದು. ಸದರಿ ಸಮೀಕ್ಷದಾರ ಮುಖಾಂತರ ಧಾರವಾಡ ಜಿಲ್ಲೆಯಲ್ಲಿ ಸರ್ವೆ ಕಾರ್ಯವನ್ನು ಹಮ್ಮಿಕೊಳ್ಳಲಾಗುವುದು.

ಕಾರ್ಯದರ್ಶಿ, ಪ್ರವಾಸೋದ್ಯಮ ಇಲಾಖೆ ರವರು ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಯಿಂದ ಅಭಿವೃದ್ಧಿಪಡಿಸಿ ಬಿಡುಗಡೆ ಮಾಡಿರುವ ಪೋಸ್ಟರ್, ಮೊಬೈಲ್ ಆಪ್ ಬಳಸುವುದರ ಕುರಿತು ವಿಡಿಯೋವನ್ನು ಮತ್ತು ಪ್ರಚಾರದ ವಿಡೀಯೋವನ್ನು ಸಿದ್ಧಪಡಿಸಲಾಗಿದ್ದು ಅವುಗಳನ್ನು ಶೀಘ್ರದಲ್ಲಿ ಸಾರ್ವಜನಿಕರಿಗೆ ಲಭ್ಯಗೊಳಿಸಲಾಗಿವುದು ಎಂದು ಅವರು ತಿಳಿಸಿದ್ದಾರೆ.



ಕೇಂದ್ರ ಸರ್ಕಾರದ ಹೊಸ ಆಯವ್ಯಯದಲ್ಲಿ Digitization of Manuscripts and Old records ಗೆ ಆಯವ್ಯಯ ಹಂಚಿಕೆಯನ್ನು ಮಾಡಲಾಗಿದೆ. ಆದುದರಿಂದ, ರಾಜ್ಯದಲ್ಲಿ ಈ ಸರ್ವೆ ಕಾರ್ಯವನ್ನು ತುರ್ತಾಗಿ ಪೂರ್ಣಗೊಳಿಸಿ ಈ ಹಸ್ತಪ್ರತಿಗಳ ಸಂರಕ್ಷಣೆ ಮತ್ತು ಡಿಜಿಟಲೀಕರಣಕ್ಕೆ ಆದ್ಯತೆ ನೀಡಲಾಗುತ್ತಿದೆ.

ಈ ಸಮೀಕ್ಷೆ ಕಾರ್ಯವನ್ನು ರಾಷ್ಟ್ರದಾದ್ಯಂತ ಒಂದು ಚಳುವಳಿಯ ರೂಪದಲ್ಲಿ ಕೈಗೊಳ್ಳಲಾಗುತ್ತಿದ್ದು, ನಮ್ಮ ರಾಜ್ಯವು ಅತೀ ಹೆಚ್ಚು ಪಾಲುದಾರಿಕೆ ವಹಿಸಿ, ಆದಷ್ಟು ಶೀಘ್ರವಾಗಿ Documentation ಮತ್ತು Digitization ಅನ್ನು ಮಾಡಿ, National Digital Repository ಪೋರ್ಟಲ್ನಲ್ಲಿ ಅಪ್ಲೋಡ್ ಮಾಡಲಾಗುತ್ತದೆ. ಇದು ಎಲ್ಲಾ ಭಾಷೆಯಲ್ಲಿಯೂ ಲಭ್ಯವಾಗುತ್ತಿದ್ದು, ನಮ್ಮ ರಾಜ್ಯದ ಮತ್ತು ಜಿಲ್ಲೆಯ ಪಾರಂಪರಿಕ ಶ್ರೀಮಂತಿಕೆಯನ್ನು ವಿಶ್ವದೆಲ್ಲೆಡೆ ಪರಿಚಯಿಸಲು ಇದರಿಂದ ಸಾಧ್ಯವಾಗುತ್ತದೆ.

ಕರ್ನಾಟಕ ಹಸ್ತಪ್ರತಿಗಳ ಪ್ರಾಧಿಕಾರವನ್ನು (Karnataka Manuscripts Authority) The Karnata ka Jnana Bhandar Manuscripts and Digitalization Bill, 2025 ವಿಧೇಯಕವನ್ನು ಮಂಡಿಸಲಾಗುತ್ತಿದ್ದು, ಅದರಂತೆ, ಖಾಸಗಿ ವ್ಯಕ್ತಿಗಳು ತಮ್ಮ ಬಳಿ ಇರುವ ಹಸ್ತಪ್ರತಿಗಳ ಮಾಹಿತಿಯನ್ನು ಕಡ್ಡಾಯವಾಗಿ ನೀಡಬೇಕಿರುತ್ತದೆ ಎಂದು ಜಿಲ್ಲಾಧಿಕಾರಿ ಸ್ನೇಹಲ್ ಆರ್. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸುಂಕ ಸಂಗ್ರಹಣಾ ಮೇಲ್ವಿಚಾರಣಾ ಸಮಿತಿ ಸಭೆ



**ಬೆಳಗಾವಿ ವಾರ್ತೆ ಗದಗ:** ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಸುಂಕ ಸಂಗ್ರಹಣಾ ಮೇಲ್ವಿಚಾರಣಾ ಸಮಿತಿ ಸಭೆಯು ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್. ಅವರ ಅಧ್ಯಕ್ಷತೆಯಲ್ಲಿ ಜರುಗಿತು.

ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್. ಅವರು ಮಾತನಾಡಿ ಜಿಲ್ಲಾ ಪಂಚಾಯತ್ ಹಾಗೂ ಅಧೀನ ಬರುವ ಕಚೇರಿಗಳಿಂದ ವಿವಿಧ ಯೋಜನೆಗಳಡಿ ಪ್ರಾರಂಭವಾಗಿರುವ ಕಾಮಗಾರಿಗಳಿಗೆ ಸಂಬಂಧಪಟ್ಟಂತೆ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಗೆ ಶೇ 1 % ರಷ್ಟು ಸುಂಕ ಭರಿಸಿರುವುದನ್ನು ಪರಿಶೀಲಿಸಲು ಸೂಚಿಸಿದರು.

ಯಾವುದೇ ಸರ್ಕಾರದ ಇಲಾಖೆ, ಸಾರ್ವಜನಿಕ ಪ್ರಾಧಿಕಾರ / ಸ್ಥಳೀಯ ಸಂಸ್ಥೆಗಳು ಹಾಗೂ ಪಂಚಾಯತ್ ರಾಜ್ ಸಂಸ್ಥೆಗಳು ಕಡಿತ ಮಾಡಿದ ಅಥವಾ ವಸೂಲು ಮಾಡಿದ ಸುಂಕವನ್ನು ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಗೆ ರವಾನಿಸದಿದ್ದಲ್ಲಿ, ಸದರಿ ಸುಂಕವನ್ನು ಮಂಡಳಿಗೆ ರವಾನಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು. ಪ್ರತಿ ತಿಂಗಳು ಈ ಕುರಿತು ಸಭೆ ಜರುಗಿಸಬೇಕು ಎಂದು ನಿರ್ದೇಶನ ನೀಡಿದರು.

ಸರ್ಕಾರದ ಇಲಾಖೆಗಳು ಅಥವಾ ಸಾರ್ವಜನಿಕ ಉದ್ದಿಮೆಗಳು ಯಾವುದೇ ನಿರ್ಮಾಣ ಕಾಮಗಾರಿಯನ್ನು ನಡೆಸಿದ್ದಲ್ಲಿ ಅಂತಹ ಇಲಾಖೆಗಳು ಅಥವಾ ಸಾರ್ವಜನಿಕ ಉದ್ದಿಮೆಗಳು ನಿರ್ಮಾಣ ಕಾಮಗಾರಿಯ ವೆಚ್ಚವನ್ನು ಪಾವತಿಸುವಾಗ ಪಾವತಿಯ ಮೂಲದಲ್ಲೇ ಶೇ 1 ರಷ್ಟು ಸುಂಕವನ್ನು ಹಾಗೂ ಯಾವುದೇ ವ್ಯಕ್ತಿಗೆ ನಿರ್ಮಾಣ ಕಾಮಗಾರಿಯನ್ನು ಕೈಗೊಳ್ಳಲು ನಗರ ಸ್ಥಳೀಯ ಸಂಸ್ಥೆಗಳು ನಕ್ಷೆ ಅನುಮೋದನೆ ಅಥವಾ ಪರವಾನಿಗೆ ನೀಡಿದ್ದಲ್ಲಿ ಹೀಗೆ ಪರವಾನಿಗೆ ಅಥವಾ ನಕ್ಷೆ ಅನುಮೋದನೆ ನೀಡುವ ಸಮಯದಲ್ಲಿ ಶೇ 1 ರಷ್ಟು ಸುಂಕವನ್ನು ಪಡೆದುಕೊಂಡು ಮಂಡಳಿಗೆ ರವಾನಿಸಬೇಕು. ನಗರ ಸ್ಥಳೀಯ ಸಂಸ್ಥೆಗಳು ಹಾಗೂ ಪಂಚಾಯತ್ ರಾಜ್ ಸಂಸ್ಥೆಗಳು ನೀಡಿದ ನಕ್ಷೆ, ಅನುಮೋದನೆ ಅಥವಾ ನಿರ್ಮಾಣ ಪರವಾನಿಗೆ ಪರಿಶೀಲನೆ ನಡೆಸಿ ಮಾಲೀಕರು, ನಿಯೋಜಕರಿಂದ ವಸೂಲು ಮಾಡಿದ ಸುಂಕವನ್ನು ಮಂಡಳಿಗೆ ರವಾನಿಸಿದ ಕುರಿತು ಪರಿಶೀಲನೆ ನಡೆಸಬೇಕೆಂದು ಅಪರ ಜಿಲ್ಲಾಧಿಕಾರಿ ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಎ.ಎ.ಕಂಬಾಳಿಮಠ, ನಗರಾಬಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೋಟೂರ, ಜಿಲ್ಲಾ ಬಾಲಕಾರ್ಮಿಕ ನಿರ್ಮೂಲನಾ ಯೋಜನಾ ಸೊಸೈಟಿಯ ಯೋಜನಾ ನಿರ್ದೇಶಕ ಸಂದೇಶ ಪಾಟೀಲ ಸೇರಿದಂತೆ ಸಮಿತಿಯ ಸದಸ್ಯರು ಹಾಜರಿದ್ದರು.

ಕಾರ್ಮಿಕ ಇಲಾಖೆಯ ಅಧಿಕಾರಿ ಶ್ರೀಶೈಲ ಸೋಮನಕಟ್ಟಿ ಸರ್ವರಿಗೂ ಸ್ವಾಗತಿಸಿ ವಂದಿಸಿದರು.

### ಎಸ್‌ಎಸ್‌ಎಲ್‌ಸಿ ಸಾಧಕರಿಗೆ ಸನ್ಮಾನ: "ಬಡತನ ಸಾಧನೆಗೆ ಅಡ್ಡಿಯಲ್ಲ": ಸಚಿವ ಎಚ್.ಕೆ. ಪಾಟೀಲ

## ಗದಗ ಜಿಲ್ಲೆಯ ವಿದ್ಯಾರ್ಥಿಗಳ ಸಾಧನೆಗೆ ಗೌರವ; ಶ್ರಮಿಸಿದ ಶಿಕ್ಷಕ ವೃಂದಕ್ಕೂ ಅಭಿನಂದನೆ ಅಭಿನಂದನೆ

**ಬೆಳಗಾವಿ ವಾರ್ತೆ ಗದಗ:** ಎಸ್‌ಎಸ್‌ಎಲ್‌ಸಿ ಪರೀಕ್ಷಾ ಫಲಿತಾಂಶದಲ್ಲಿ ಗದಗ ಜಿಲ್ಲೆಯ ವಿದ್ಯಾರ್ಥಿಗಳು ಉತ್ತಮ ಸಾಧನೆಗೈದ ಹಿನ್ನೆಲೆ, ಜಿಲ್ಲೆಯಲ್ಲಿ ಪ್ರಥಮ, ದ್ವಿತೀಯ ಹಾಗೂ ತೃತೀಯ ಸ್ಥಾನ ಪಡೆದ ವಿದ್ಯಾರ್ಥಿಗಳಿಗೆ ನಗರದಲ್ಲಿನ ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿ ಭಾನುವಾರ ಸನ್ಮಾನ ಕಾರ್ಯಕ್ರಮ ಆಯೋಜಿಸಲಾಯಿತು.

ಕಾರ್ಯಕ್ರಮದಲ್ಲಿ ರಾಜ್ಯದ ಕಾನೂನು, ನ್ಯಾಯ ಹಾಗೂ ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆಯ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ಅವರು ಸಾಧಕರನ್ನು ಸನ್ಮಾನಿಸಿ ಅಭಿನಂದಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಚಿವ ಎಚ್ ಕೆ ಪಾಟೀಲರು, "ವಿದ್ಯಾರ್ಜನೆಗೆ ಬಡತನ ಎಂದಿಗೂ ಅಡ್ಡಿಯಾಗುವುದಿಲ್ಲ ಎಂಬುದಕ್ಕೆ ಗದಗ ಜಿಲ್ಲೆಯ ವಿದ್ಯಾರ್ಥಿಗಳ ಸಾಧನೆಯೇ ಸ್ಪಷ್ಟ ಉದಾಹರಣೆ. ಬಡತನವನ್ನು ನೆಪ ಮಾಡದೆ ಪ್ರತಿಯೊಬ್ಬ ವಿದ್ಯಾರ್ಥಿಯೂ ಶಿಕ್ಷಣದಲ್ಲಿ ಮುನ್ನಡೆಯಬೇಕು," ಎಂದು ಹೇಳಿದರು.

ಸರ್ಕಾರ ಶಿಕ್ಷಣಕ್ಕೆ ಹೆಚ್ಚಿನ ಉತ್ತೇಜನ ನೀಡುತ್ತಿರುವುದನ್ನು ಉಲ್ಲೇಖಿಸಿದ ಅವರು, ಅದರ ಸದ್ಬಳಕೆ ಮಾಡಿಕೊಂಡು ಜೀವನದಲ್ಲಿ ಯಶಸ್ಸು ಸಾಧಿಸಲು ವಿದ್ಯಾರ್ಥಿಗಳು ಮುಂದಾಗಬೇಕು ಎಂದು ಕರೆ ನೀಡಿದರು. ಗದಗ ಜಿಲ್ಲೆಯ ಮಕ್ಕಳು ಶೈಕ್ಷಣಿಕವಾಗಿ ಇನ್ನಷ್ಟು ಸಾಧನೆ ಮಾಡಿ ಉನ್ನತ ಹುದ್ದೆಗಳನ್ನು ಅಲಂಕರಿಸಲಿ ಎಂದು ಆಶಿಸಿದರು.

ಮಕ್ಕಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ ನೀಡುವಲ್ಲಿ ಪಾಲಕರು ನಿರ್ಲಕ್ಷ್ಯ ತೋರಬಾರದು. ವಿದ್ಯಾರ್ಥಿಗಳ ಭವಿಷ್ಯ ನಿರ್ಮಾಣದಲ್ಲಿ ಪಾಲಕರ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದು ಸಚಿವರು ಅಭಿಪ್ರಾಯಪಟ್ಟರು.

ಜಿಲ್ಲೆಯ ಒಟ್ಟು ಫಲಿತಾಂಶ ಸುಧಾರಣೆಗೆ ಶ್ರಮಿಸಿದ ಜಿಲ್ಲಾಡಳಿತ, ಶಿಕ್ಷಣ ಇಲಾಖೆಯ ಅಧಿಕಾರಿಗಳು ಹಾಗೂ ಶಿಕ್ಷಕ



ವೃಂದಕ್ಕೆ ಸಚಿವ ಎಚ್ ಕೆ ಪಾಟೀಲರು ಅಭಿನಂದನೆ ಸಲ್ಲಿಸಿದರು.

ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್ ಸಾಬ್ ಬಬರ್ಚಿ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾ ಅಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕು ಅಧ್ಯಕ್ಷ ಅಶೋಕ ಮಂದಾಲಿ, ಜಿಪಂ ಮಾಜಿ ಅಧ್ಯಕ್ಷ ಸಿದ್ದು ಪಾಟೀಲ, ಎಸ್.ಎನ್. ಬಳ್ಳಾರಿ, ಪಾರೂಕ್ ಹುಬ್ಬಳ್ಳಿ, ಬಸವರಾಜ ಕಡೇಮನಿ, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್., ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ, ಶರಣು ಗೋಗೇರಿ, ನಡುವಿನಮನಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## TAVI ಹೃದಯ ಶಸ್ತ್ರಚಿಕಿತ್ಸೆ ನಡೆಸಿದ ತಂಡಕ್ಕೆ ಸಚಿವ ಪಾಟೀಲ ಅಭಿನಂದನೆ

## ವರ್ಷದೊಳಗಾಗಿ 543ಕ್ಕೂ ಅಧಿಕ ಹೃದಯ ಕಾಯಿಲೆ ಪ್ರಕರಣಗಳಿಗೆ ಶಸ್ತ್ರಚಿಕಿತ್ಸೆ



**ಬೆಳಗಾವಿ ವಾರ್ತೆ ಗದಗ:** ಹೊಸ ತಂತ್ರಜ್ಞಾನ ಅಳವಡಿಸಿಕೊಳ್ಳುವ ಮೂಲಕ ಕಳೆದ ಹಲವು ವರ್ಷಗಳಿಂದ ತನ್ನ ವಿಶೇಷತೆಗಳಿಂದ ತನ್ನ ಹಿರಿಮೆ ಹೆಚ್ಚಿಸುತ್ತ ಮಾದರಿಯಾಗುವಲ್ಲಿ ಕೆಲಸ ಮಾಡುತ್ತಿರುವ ಕೆ.ಎಚ್.ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯು ಇದೀಗ ಖಿಂಗಿಖ ಹೃದಯ ಶಸ್ತ್ರಚಿಕಿತ್ಸೆ ಯಶಸ್ವಿಯಾಗಿ ನೆರವೇರಿಸುವ ಮೂಲಕ ರಾಜ್ಯದ ಗಮನ ಸೆಳೆದಿದೆ ಎಂದು ಕಾನೂನು, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ಗದಗಿನ ಕೆ.ಎಚ್.ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ ಭಾನುವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೆ.ಎಚ್. ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಕ್ಯಾಥ್ ಲ್ಯಾಬ್‌ನಲ್ಲಿ ಮೊಟ್ಟ ಮೊದಲ ಬಾರಿಗೆ TAVI (ಟ್ರಾನ್ಸ್‌ಕ್ಯಾಥೆಟರ್ ಮಹಾಪಧಮನಿಯ ವಾಲ್ವ್ ಇಂಪ್ಲಾಂಟೇಶನ) ಹೃದಯ ಶಸ್ತ್ರಚಿಕಿತ್ಸೆ ಯಶಸ್ವಿಯಾಗಿ ನಡೆಸಲಾಗಿದೆ. ಈ ಮೂಲಕ ಜಯದೇವ ಆಸ್ಪತ್ರೆ ಹೊರತುಪಡಿಸಿ TAVI ಯಶಸ್ವಿ ಶಸ್ತ್ರಚಿಕಿತ್ಸೆ ನಡೆಸಿದ ಮೊದಲ ಜಿಲ್ಲೆ ಎಂಬ ಹೆಗ್ಗಳಿಕೆಗೆ ಗದಗ ಪಾತ್ರವಾಗಿದೆ ಎಂದರು.

ಖಾಸಗಿ ಆಸ್ಪತ್ರೆಗಳಲ್ಲಿ 22–25 ಲಕ್ಷ ರೂ. ವೆಚ್ಚ ತಗುಲಬಹುದಾದ ಖಿಂಗಿಖ ಹೃದಯ ಶಸ್ತ್ರಚಿಕಿತ್ಸೆಯನ್ನು ಜಿಲ್ಲೆಯ ನರಗುಂದ ತಾಲೂಕಿನ 68 ವರ್ಷದ ರಮೇಶ ಮುರಡಿ ಅವರು ಎಸ್ಸಿಪಿ–ಟಿಎಸ್ಪಿ ಅನುದಾನದಡಿ ಉಚಿತವಾಗಿ ಶಸ್ತ್ರಚಿಕಿತ್ಸೆ ಮಾಡಲಾಗಿದೆ ಎಂದು ಸಚಿವ ಎಚ್.ಕೆ. ಪಾಟೀಲ ಹೇಳಿದರು.

ಕೆಎಚ್‌ಪಿಐಎಂಎಸ್ ನಿರ್ದೇಶಕ ಡಾ। ಬಸವರಾಜ ಬೊಮ್ಮನಹಳ್ಳಿ ಮಾರ್ಗದರ್ಶನದಡಿ ಹೃದ್ರೋಗ ತಜ್ಞರಾದ ಡಾ। ಸಂಜೀವ್ ಚಿಂತಾಮನಿ ಸಹಕಾರದಲ್ಲಿ ಬೆಂಗಳೂರಿನ ಖಿಂಗಿಖ ತಜ್ಞ ವೈದ್ಯ ಡಾ। ವಿಕ್ರಮ ಪಾಟೀಲ ನೇತೃತ್ವದ ವೈದ್ಯಕೀಯ ತಂಡ 68 ವರ್ಷದ ವ್ಯಕ್ತಿಗೆ ಸಂಕೀರ್ಣವಾದ 'ಹೈಬ್ರಿಡ್ ಖಿಂಗಿಖ ವಿಧಾನದ ಮೂಲಕ ಯಶಸ್ವಿ ಹೃದಯ ಮಹಾಪಧಮನಿಯ ಕವಾಟ ಬದಲಾವಣೆ ಮಾಡಲಾಗಿದೆ.

ಜಯದೇವ ಆಸ್ಪತ್ರೆ ಹೊರತುಪಡಿಸಿ ಇದು ರಾಜ್ಯದಲ್ಲೇ ಸರಕಾರಿ ಆಸ್ಪತ್ರೆ ಹಾಗೂ ಇತರೆ ಜಿಲ್ಲೆಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಕ್ಯಾಥ್ ಲ್ಯಾಬ್‌ವೊಂದರಲ್ಲಿ ನಡೆಸಿದ ಮೊದಲ ಯಶಸ್ವಿ ಶಸ್ತ್ರಚಿಕಿತ್ಸೆ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ ಎಂದರು.

ಕ್ಯಾಥ್ ಲ್ಯಾಬ್ ಪ್ರಾರಂಭವಾದ ವರ್ಷದೊಳಗೆ 543ಕ್ಕೂ ಹೆಚ್ಚು ಯಶಸ್ವಿ ಹೃದಯ ಶಸ್ತ್ರಚಿಕಿತ್ಸೆ ಮಾಡಲಾಗಿದೆ. ಆ ಪೈಕಿ 272ಕ್ಕೂ ಹೆಚ್ಚು ಆಂಜಿಯೋಪ್ಲಾಸ್ಟಿ (ಸ್ಟಂಟ್ ಅಳವಡಿಕೆ), 494ಕ್ಕೂ ಹೆಚ್ಚು ಆಂಜಿಯೋಗ್ರಾಫಿ, 13 ಪೇಸ್ ಮೇಕರ್ (ಕೃತಕ ಹೃದಯ ಮಿಡಿತ ಸಾಧನ ಅಳವಡಿಕೆ), 1 ಸಿಆರ್‌ಟಿ–ಡಿ, 1 ಎಸ್‌ಎಸ್‌ಡಿ ಡಿವೈಸ್ ಕ್ಲೋಸರ್ ಹಾಗೂ 2 ಐವಿಐ ಚಿಕಿತ್ಸೆ ನೀಡಲಾಗಿದೆ. ಸದ್ಯ ಈಗ TAVI ಯಶಸ್ವಿ ಹೃದಯ ಶಸ್ತ್ರಚಿಕಿತ್ಸೆ ಮಾಡಲಾಗಿದೆ ಎಂದು ವೈದ್ಯರ ಬಗ್ಗೆ ಪ್ರಶಂಸೆ ವ್ಯಕ್ತಪಡಿಸಿದರು. ಹೃದ್ರೋಗ ತಜ್ಞ ಡಾ. ವಿಕ್ರಂ ಪಾಟೀಲ ಮಾತನಾಡಿ,ಖಿಂಗಿಖ ಇದು ತೆರೆದ ಹೃದಯ ಶಸ್ತ್ರಚಿಕಿತ್ಸೆ (Open Heart Surgery) ಇಲ್ಲದೆ, ತೊಡೆಯ ಸಂದಿನ ಮೂಲಕ ಕ್ಯಾತಿಟರ್ ಬಳಸಿ ಹೃದಯದ ಕವಾಟ ಬದಲಾಯಿಸುವ ಅತ್ಯಾಧುನಿಕ ಚಿಕಿತ್ಸಾ ವಿಧಾನವಾಗಿದೆ ಎಂದು ಚಿಕಿತ್ಸೆ ವಿಧಾನದ ಕುರಿತು ವಿವರಿಸಿದರು.

ಕೆ.ಎಚ್. ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ನಿರ್ದೇಶಕ ಡಾ। ಬಸವರಾಜ ಬೊಮ್ಮನಹಳ್ಳಿ, ಡಾ. ಸಂಜೀವ್ ಚಿಂತಾಮಣಿ, ಡಾ. ವಿನಾಯಕ, ಬಿ.ಬಿ. ಅಸೂಟಿ, ಅಶೋಕ ಮಂದಾಲಿ, ಸಿದ್ದು ಪಾಟೀಲ, ಕೆ.ಎಚ್. ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಆಡಳಿತಾಧಿಕಾರಿ ಹಾಗೂ ಎಡಿಸಿ ಡಾ. ದುರುಗೇಶ್ ಕೆ.ಆರ್. ಸೇರಿ ಹಲವರು ಇದ್ದರು.

"ಗದಗದಲ್ಲಿ ಕ್ಯಾಥಲ್ಯಾಬ್ ಇಲ್ಲದ ಸಮಯದಲ್ಲಿ ಹೃದ್ರೋಗಿಗಳನ್ನು ಬೆಂಗಳೂರು, ಹುಬ್ಬಳ್ಳಿಗೆ ಕಳುಹಿಸಬೇಕಾದ ಅನಿವಾರ್ಯವಿತ್ತು. ಗದಗದಲ್ಲಿ ಕ್ಯಾಥಲ್ಯಾಬ್ ಆರಂಭವಾಗಿ ವರ್ಷದೊಳಗಾಗಿ 543ಕ್ಕೂ ಅಧಿಕ ಹೃದಯ ಕಾಯಿಲೆ ಪ್ರಕರಣಗಳಿಗೆ ಶಸ್ತ್ರಚಿಕಿತ್ಸೆ ನೆರವೇರಿಸಲಾಗಿದ್ದು, ತಂತ್ರಜ್ಞಾನಗಳನ್ನು ಜನಸಾಮಾನ್ಯರಿಗೆ ತಲುಪಿಸುವ ಕೆಲಸ ಮಾಡಬೇಕಿದೆ."

**–ಎಚ್.ಕೆ. ಪಾಟೀಲ, ಸಚಿವರು**

"TAVI ಖಾಸಗಿ ಆಸ್ಪತ್ರೆಯಲ್ಲಿ 22ರಿಂದ 25 ಲಕ್ಷ ರೂ. ವರೆಗೆ ಖರ್ಚಾಗುತ್ತದೆ. ಕೆ.ಎಚ್. ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಆಸ್ಪತ್ರೆಯಲ್ಲಿ ಎಸ್ಸಿಪಿ–ಟಿಎಸ್ಪಿ ಅನುದಾನದಡಿ ಉಚಿತವಾಗಿ ಶಸ್ತ್ರಚಿಕಿತ್ಸೆ ಮಾಡಲಾಗಿದೆ. ಖಿಂಗಿಖ 5 ರಿಂದ 6 ಗಂಟೆಗಳ ಕಾಲ ಶಸ್ತ್ರಚಿಕಿತ್ಸೆ ನಡೆಸಲಾಗಿದ್ದು, 24 ಗಂಟೆಯೊಳಗೆ ಡಿಸ್ಚಾರ್ಜ್ ಮಾಡಲಾಗಿದೆ."

**ಡಾ. ವಿಕ್ರಂ ಪಾಟೀಲ, TAVI ತಜ್ಞ ವೈದ್ಯ**

# ಪದವಿ ಪ್ರದಾನ




**ಬೆಳಗಾವಿ ವಾರ್ತೆ ಲಕ್ಷ್ಮೇಶ್ವರ:** ಪಟ್ಟಣದ ಶ್ರೀಮತಿ ಕಮಲಾ ಶ್ರೀ ವೆಂಕಪ್ಪ ಎಂ ಅಗಡಿ ಯಾಂತ್ರಿಕ ಮತ್ತು ತಾಂತ್ರಿಕ ಕಾಲೇಜಿನಲ್ಲಿ 20ನೇ ಪದವಿ ಪ್ರಧಾನ ಸಮಾರಂಭ ಜರುಗಿತು. ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಆಗಮಿಸಿದ್ದ ಶಿಕ್ಷಣ ತಜ್ಞ ಸುರೇಶ ಕುಲಕರ್ಣಿಯವರು ಮಾತನಾಡಿ ಪದವಿ ಪಡೆದ ವಿದ್ಯಾರ್ಥಿಗಳು ಉತ್ತಮ ಗುಣಮಟ್ಟದ ಶಿಕ್ಷಣದೊಂದಿಗೆ ಸಂಸ್ಕಾರ ಮತ್ತು ಸಂಸ್ಕೃತಿಗಳೊಂದಿಗೆ ಭವಿಷ್ಯವನ್ನು ರೂಪಿಸಿಕೊಂಡು ಹೆತ್ತ ತಂದೆ ತಾಯಿಗಳಿಗೆ ಕೀರ್ತಿ ತರಬೇಕು ಯಾವ ತಂದೆ ತಾಯಿಗಳು ಮಕ್ಕಳ ಭವಿಷ್ಯಕ್ಕಾಗಿ ತಮ್ಮನ್ನು ತಾವು ಸಮರ್ಪಿಸಿಕೊಂಡು ಎಲ್ಲವನ್ನು ಧಾರೆಯರದು , ಭವಿಷ್ಯ ರೂಪಿಸಿದ ಹೆತ್ತ ತಂದೆ ತಾಯಿಗಳನ್ನು ಮರೆಯಬಾರದು ಅದೇ ರೀತಿ ಶಿಕ್ಷಣ ನೀಡಿದ ಸಂಸ್ಥೆ ಮತ್ತು ಗುರುಗಳನ್ನು ಸಹ ಮರೆಯಬಾರದು ಉತ್ತಮ ಹುದ್ದೆಗಳನ್ನು ಹೊಂದಿದ ಮೇಲೆ ತಾವು ಕಲಿತ ಶಿಕ್ಷಣ ಸಂಸ್ಥೆಯ ಉನ್ನತಿಗಾಗಿ ಇನ್ನಷ್ಟು ಶ್ರಮಿಸಬೇಕು ಎಂದು ಹೇಳಿದರು.

ಸಮಾರಂಭದಲ್ಲಿ ಪ್ರಾಚಾರ್ಯ ಪುರುಷರಾಮ ಬಾರ್ಕಿಯವರು ಪದವಿ ಪ್ರಧಾನ ಮಾಡಿ ವಿದ್ಯಾರ್ಥಿಗಳು ಇನ್ನು ಮುಂದೆ ಉದ್ಯೋಗಗಳನ್ನು ಹೊಂದಿ ಅದರಲ್ಲಿ ಪರಿಣಿತ್ವ ಪಡೆದುಕೊಂಡು ಸ್ವತಃ ದೊಡ್ಡ ದೊಡ್ಡ ಉದ್ಯೋಗ ಪತಿಗಳಾಗ ಬೇಕೆಂದು ಹೇಳಿದರು. ಕಾರ್ಯಕ್ರಮದಲ್ಲಿ ಚಂದ್ರಮೌಳಿ ಜೋಶಿ ಡಾ. ರಾಘವೇಂದ್ರ ಎ ಲಕ್ಷಣ ಪಾಟೀಲ ಸುಭಾಸ್ ಮೇಟಿ ವಿಕ್ರಂ ಶಿರೋಳ ಸೇರಿದಂತೆ ಕಾಲೇಜಿನ ಸಿಬ್ಬಂದಿ ವರ್ಗದವರು ವಿದ್ಯಾರ್ಥಿಗಳ ಪೋಷಕರು ಆಡಳಿತ ಮಂಡಳಿಯ ಸದಸ್ಯರು ಪಾಲ್ಗೊಂಡಿದ್ದರು.

# ಉದ್ಯೋಗಕ್ಕಾಗಿ ನೇರ ಸಂದರ್ಶನ

ಗದಗ: ಜಿಲ್ಲೆಯ ನಿರುದ್ಯೋಗಿ ಅಭ್ಯರ್ಥಿಗಳಿಗೆ ಉದ್ಯೋಗ ಒದಗಿಸುವ ನಿಟ್ಟಿನಲ್ಲಿ ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ, ವತಿಯಿಂದ ನೇರ ಸಂದರ್ಶನವಿದ್ದು ಎಪ್ರಿಲ್ 29 ರಂದು ಬುಧವಾರ ಬೆಳಗ್ಗೆ 10–00 ಗಂಟೆಗೆ ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ, ಜಿಲ್ಲಾ ಆಡಳಿತ ಭವನ 2ನೇ ಮಹಡಿ ರೂಂ.ನಂ:–215 ಗದಗ, ಇಲ್ಲಿ ನೇರ ಸಂರ್ದಶನ ಹಮ್ಮಿಕೊಳ್ಳಲಾಗಿದೆ. ನೇರ ಸಂರ್ದಶನದಲ್ಲಿ ಈ ಕೆಳಗಿನ ಕಂಪನಿಗಳು ಭಾಗವಹಿಸಲಿದೆ.

ಪುಕೂಕು ಇಂಡಿಯಾ ಪ್ರೈವೇಟ ಲಿಮಿಟೆಡ, ಬೆಳಗಾವಿ ( ಎಮ್.ಎನ್.ಸಿ ಕಂಪನಿ ), **ವಿದ್ಯಾರ್ಹತೆ :** ಡಿಪ್ಲೊಮಾ ಮತ್ತು ಬಿ.ಎ, ಬಿ.ಕಾಂ, ಬಿ.ಎಸಿ, ಬಿ.ಬಿ.ಎ ಹಾಗೂ ಯಾವುದೇ ಪದವಿ, ಹುದ್ದೆ : ಮಶಿನ ಆಪರೇಟರ ಹಾಗೂ ಅಸೆಂಬ್ಲಿ ಡಿಪಾರಟಮೆಂಟ, ವಯಸ್ಸು : 18 ರಿಂದ 26, ಕೆಲಸದ ಸ್ಥಳ : ಬೆಳಗಾವಿ. ಇತರೆ: ಇ.ಎಸ್.ಐ, ಪಿ.ಎಫ್, ಭೋನಸ ಮತ್ತು ಗ್ರಾಚೂಟಿ. ನೇರ ಸಂರ್ದಶನದಲ್ಲಿ ಪಾಲ್ಗೋಳುವ ಅಭ್ಯರ್ಥಿಗಳು ತಮ್ಮ ವಿದ್ಯಾರ್ಹತೆಯ ಅಂಕಪಟ್ಟಿಗಳ ಝೆರಾಕ್ಸ್ ಪ್ರತಿಗಳು, 2 ರೆಸ್ಯೂಮೆ (ಬಯೋಡಾಟಾ) ಪ್ರತಿಗಳು, ಮತ್ತು ಆಧಾರ ಕಾರ್ಡ್ ಝೆರಾಕ್ಸೊಂದಿಗೆ ಭಾಗವಹಿಸಬಹುದು.

ನೇರ ಸಂರ್ದಶನದಲ್ಲಿ ಭಾಗವಹಿಸಿದ ಅಭ್ಯರ್ಥಿಗಳಿಗೆ ನೋಂದಣಿ ಕಡ್ಡಾಯವಾಗಿರುತ್ತದೆ. ಹಾಗೂ ಯುವನಿಧಿ ಯೋಜನೇಯ ಫಲಾನುಭವಿಗಳು ಈ ನೇರ ಸಂದರ್ಶನದಲ್ಲಿ ಕಡ್ಡಾಯವಾಗಿ ಪಾಲ್ಗೋಳಬೇಕು. ನೇರ ಸಂರ್ದಶನದಲ್ಲಿ ಭಾಗವಹಿಸುವ ಅಭ್ಯರ್ಥಿಗಳು ನೋಂದಣಿಯನ್ನು ನೇರ ಸಂರ್ದಶನದ ದಿನದಂದೇ ಮಾಡಿಸಬೇಕಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂರವಾಣಿ ಸಂಖ್ಯೆ 9632607419, 6363330688, 9538862450 ಕ್ಕೆ ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗಾಧಿಕಾರಿಯಾದ ಬಸವಂತ ಪಿ ಎನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಂಭ್ರಮದ ರಥೋತ್ಸವ

**ಬೆಳಗಾವಿ ವಾರ್ತೆ ಲಕ್ಷ್ಮೇಶ್ವರ:** ಪಟ್ಟಣದ ಐತಿಹಾಸಿಕ ಪ್ರಸಿದ್ಧ ಶ್ರೀ ಸೋಮೇಶ್ವರ ದೇವಸ್ಥಾನದ ಶ್ರೀ ಸೋಮೇಶ್ವರ ರಥೋತ್ಸವ ಅತ್ಯಂತ ಸಡಗರ ಸಂಭ್ರಮದಿಂದ ಸಹಸ್ರಾರು ಭಕ್ತರ ಸಮ್ಮುಖದಲ್ಲಿ ಜರುಗಿತು.

ರಥೋತ್ಸವದ ಗಾಲಿಗಳಿಗೆ ಪೂಜೆ ಸಲ್ಲಿಸಿ ಇಡಿಗಾಯಿ ನೈವೇದ್ಯ ಮಾಡಿ ಶ್ರೀ ಸೋಮೇಶ್ವರ ಉತ್ಸವ ಮೂರ್ತಿಯನ್ನು ಪ್ರತಿಷ್ಠಾಪಿಸುತ್ತಿದ್ದಂತೆ ನೆರೆದಿದ್ದ ಸಾವಿರಾರು ಭಕ್ತರು ಮುಗಿಲು ಮುಟ್ಟುವಂತೆ ಹರ ಹರ ಮಹದೇವ್ ಎಂಬ ಉದ್ಘಾಷಗಳನ್ನು ಮಾಡಿದರು. ಬಳಿಕ ರಥಸಾಗುವ ಮಾರ್ಗದಲ್ಲಿ ನೆರೆದಿದ್ದ ಸಾವಿರಾರು ಭಕ್ತರು ರಥಕ್ಕೆ ಬಾಳೆಹಣ್ಣು ಉತ್ತತ್ತಿ ನಿಂಬೆಹಣ್ಣುಗಳನ್ನು ಎಸೆದರು.

ಮುಂಜಾನೆಯಿಂದಲೇ ಪಟ್ಟಣ ಪ್ರದೇಶ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ಭಕ್ತರು ಹಾಗೂ ದೂರದ ಊರುಗಳಲ್ಲಿ ವಾಸವಿರುವ ಜನರು ಸೋಮೇಶ್ವರರ ಭಕ್ತರು ದೇವಸ್ಥಾನಕ್ಕೆ ತೆರಳಿ ಹಣ್ಣು ಕಾಯಿ ನೈವೇದ್ಯ ಮಾಡಿಸಿಕೊಂಡು ಬರುತ್ತಿರುವ ದೃಶ್ಯ ಸಾಮಾನ್ಯವಾಗಿತ್ತು.



ರಥೋತ್ಸವದಲ್ಲಿ ಜಾತ್ರಾ ಮಹೋತ್ಸವ ಸಮಿತಿಯ ಶ್ರೀ ಸೋಮೇಶ್ವರ ದೇವಸ್ಥಾನ ಸೇವಾ ಸಮಿತಿ ಮತ್ತು ತಾಲೂಕ ಅರ್ಚಕರ ಸಂಘದ ಸರ್ವ ಪದಾಧಿಕಾರಿಗಳು ಸೇರಿದಂತೆ ಸಹಸ್ರಾರು ಭಕ್ತರು ಪಾಲ್ಗೊಂಡಿದ್ದರು.

# ಪಶು ಔಷಧಿ ವಿಕ್ರಯ ಕೇಂದ್ರ ಸ್ಥಾಪನೆಗೆ ಅರ್ಜಿ

ಬಾಗಲಕೋಟೆ: ಕೇಂದ್ರ ಸರಕಾರದ ಡಿಎಎಚ್.ಡಿ ಇಲಾಖೆಯ ಪಶುಪಾಲಕರಿಗೆ ಕೈಗೆಟಕುವ ದರದಲ್ಲಿ ಉತ್ತಮ ಔಷಧಿ ಒದಗಿಸುವ ನಿಟ್ಟಿನಲ್ಲಿ ರಾಜ್ಯದಲ್ಲಿ ಒಟ್ಟು 266 ಪಶು ಔಷಧಿ ವಿಕ್ರಮ ಕೇಂದ್ರಗಳನ್ನು ಪ್ರಾರಂಭಿಸಲು ಉದ್ದೇಶಿಸಲಾಗಿದೆ.

ಕಾರ್ಯಕ್ರಮದ ಮಾರ್ಗಸೂಚಿಯನ್ವಯ ಆಸಕ್ತಿ ಹೊಂದಿರುವ ಪಿಎಂ–ಕಿಸಾನ್ ಸಮೃದ್ಧಿ ಕೇಂದ್ರ ಸ್ಥಳೀಯ ರೈತ ಸಂಪರ್ಕ ಕೇಂದ್ರಗಳು, ಹಾಲು ಉತ್ಪಾದಕರ ಸಹಕಾರ ಸಂಘ ಹಾಗೂ ಇತರೆ ಸಹಕಾರಿ ಸಂಘಗಳು ಪಶು ಔಷಧಿ ವಿಕ್ರಮ ಕೇಂದ್ರಗಳನ್ನು ಆರಂಭಿಸಲು ಸಹಕಾರ ಇಲಾಖೆಯ ಸಮನ್ವಯದೊಂದಿಗೆ, ಕೇಂದ್ರ ಸರಕಾರದ ಡಿಎಎಚ್‌ಡಿ ಇಲಾಖೆಯ ವೆಬ್‌ಸೈಟ್ http://dahd.gov.in ನಲ್ಲಿ ಅರ್ಜಿ ಸಲ್ಲಿಸುವಂತೆ ಪಶು ಇಲಾಖೆಯ ಉಪನಿರ್ದೇಶಕ ಡಾ.ಎಸ್.ಎಚ್.ಕರಡಿಗುಡ್ಡ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307. Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI, KARNATAKA - 590001